ಸಂಪುಟ 01 । ಸಂಚಿಕೆ 195 ಶನಿವಾರ 19 ಸೆಪ್ಟೆಂಬರ್ 2026 । ಪುಟ 4 । ಬೆಲೆ–2 ರೂ.

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) International Coastal Cleanup Day ?
ಅಂತರರಾಷ್ಟ್ರೀಯ ಕರಾವಳಿ ಸ್ವಚ್ಛತಾ ದಿನ
ಸಮುದ್ರ, ಕಡಲತೀರ ಮತ್ತು ಜಲಮೂಲಗಳಿಂದ ತ್ಯಾಜ್ಯವನ್ನು ತೆರವುಗೊಳಿಸುವ ಮೂಲಕ ಪರಿಸರ ಸಂರಕ್ಷಣೆಗೆ ಉತ್ತೇಜನ ನೀಡುವ ದಿನ.

2)National Gymnastics Day ರಾಷ್ಟ್ರೀಯ ಜಿಮ್ನಾಸ್ಟಿಕ್ಸ್ ದಿನ
ಜಿಮ್ನಾಸ್ಟಿಕ್ಸ್ ಕ್ರೀಡೆಯ ಮಹತ್ವ, ದೈಹಿಕ ಚಟುವಟಿಕೆ ಮತ್ತು ಕ್ರೀಡಾ ಕೌಶಲ್ಯಗಳ ಬಗ್ಗೆ ಅರಿವು ಮೂಡಿಸುವ ದಿನ.

3) International Talk Like a Pirate Day ಕಡಲ್ಗಳ್ಳರಂತೆ ಮಾತನಾಡುವ ವಿನೋದಮಯ ದಿನ.

4) National Dance Day ನೃತ್ಯದ ಕಲೆ ಮತ್ತು ಅದರ ಮಹತ್ವವನ್ನು ಆಚರಿಸುವ ದಿನ.

ಸುಭಾಷಿತ

ನಡೆದಷ್ಟೂ ದಾರಿಯಿದೆ, ಪಡೆದಷ್ಟೂ
ಭಾಗ್ಯವಿದೆ ಎಂಬುದೇ ಜಗತ್ತು ನಮಗೆ
ಕೊಡುವ ಸಂದೇಶ.

ವಿ.ಕೃ. ಗೋಕಾಕ್

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಹಿಂದೂ ಮಹಾಗಣಪತಿ ದಾಸೋಹದಲ್ಲಿ ಮುಸ್ಲಿಂ ಬಾಂಧವರಿಂದ ಅನ್ನಸೇವೆ;

ಸೌಹಾರ್ದತೆ, ಸಹೋದರತ್ವಕ್ಕೆ ಸಾಕ್ಷಿಯಾದ ಸಿಂಧನೂರು

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಹಿಂದೂ ಮಹಾಗಣಪತಿ ಉತ್ಸವದ ಅಂಗವಾಗಿ ಶುಕ್ರವಾರ ಆಯೋಜಿಸಿದ್ದ ದಾಸೋಹ ಕಾರ್ಯಕ್ರಮದಲ್ಲಿ ಹಿಂದೂ?ಮುಸ್ಲಿಂ ಭಾವೈಕ್ಯತೆ ಹಾಗೂ ಸೌಹಾರ್ದತೆಯ ಸುಂದರ ಸಂದೇಶ ಮೂಡಿಬಂದಿತು. ಉತ್ಸವದ ದಾಸೋಹ ಕಾರ್ಯಕ್ರಮದಲ್ಲಿ ಮುಸ್ಲಿಂ ಬಾಂಧವರು ಸಕ್ರಿಯವಾಗಿ ಭಾಗವಹಿಸಿ, "ಅನ್ನದಾನ ಶ್ರೇಷ್ಠದಾನ" ಎಂಬ ಸಂಕಲ್ಪದೊಂದಿಗೆ ಸ್ವತಃ ಸಾರ್ವಜನಿಕರಿಗೆ ಊಟ ಬಡಿಸುವ ಮೂಲಕ ಮಾನವೀಯತೆ ಮತ್ತು ಸಹೋದರತ್ವಕ್ಕೆ ಸಾಕ್ಷಿಯಾದರು.





ಹಿಂದೂ ಮಹಾಗಣಪತಿ ಉತ್ಸವದ ಅಂಗವಾಗಿ ನಡೆದ ದಾಸೋಹದಲ್ಲಿ ಮುಸ್ಲಿಂ ಸಮುದಾಯದ ಮುಖಂಡರು ಹಾಗೂ ಯುವಕರು ಯಾವುದೇ ಭೇದಭಾವವಿಲ್ಲದೆ ಭಾಗವಹಿಸಿ ಅನ್ನಸೇವೆಯಲ್ಲಿ ತೊಡಗಿಸಿಕೊಂಡರು. ಸ್ವತಃ ಊಟ ಬಡಿಸಿ, ದಾಸೋಹದಲ್ಲಿ ಪಾಲ್ಗೊಂಡ ಪ್ರತಿಯೊಬ್ಬರಿಗೂ ಆತ್ಮೀಯತೆಯಿಂದ ಸೇವೆ ಸಲ್ಲಿಸಿದ ದೃಶ್ಯವು ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿತ್ತು.

"ಅನ್ನಕ್ಕೆ ಜಾತಿ ಧರ್ಮದ ಬೇಧವಿಲ್ಲ; ಹಸಿದವರಿಗೆ ಅನ್ನ ನೀಡುವುದು ಎಲ್ಲಕ್ಕಿಂತ ದೊಡ್ಡ ಮಾನವೀಯ ಸೇವೆ" ಎಂಬ ಸಂದೇಶವನ್ನು ಈ ಅನ್ನಸೇವೆ ಸಾರಿತು. ಧರ್ಮಗಳು ತಮ್ಮದೇ ಆದ ಆಚರಣೆ ಮತ್ತು ಸಂಪ್ರದಾಯಗಳನ್ನು ಹೊಂದಿದ್ದರೂ, ಮಾನವೀಯತೆ, ಪ್ರೀತಿ, ಸಹೋದರತ್ವ ಹಾಗೂ ಪರಸ್ಪರ ಗೌರವ ಎಲ್ಲರನ್ನೂ ಒಂದೇ ಬಂಧದಲ್ಲಿ ಬೆಸೆಯುತ್ತವೆ ಎಂಬುದಕ್ಕೆ ಈ ಕಾರ್ಯಕ್ರಮ ಉತ್ತಮ ಉದಾಹರಣೆಯಾಯಿತು.

ಸಿಂಧನೂರು ನಗರವು ಹಿಂದೂ?ಮುಸ್ಲಿಂ ಭಾವೈಕ್ಯತೆ ಹಾಗೂ ಸೌಹಾರ್ದತೆಗೆ ಹೆಸರಾಗಿದ್ದು, ವಿವಿಧ ಧರ್ಮಗಳ ಜನರು ಪರಸ್ಪರರ ಹಬ್ಬ?ಹರಿದಿನಗಳಲ್ಲಿ ಭಾಗವಹಿಸಿ ಶುಭಾಶಯ ಕೋರುವ ಹಾಗೂ ಸಹಕಾರ ನೀಡುವ ಪರಂಪರೆಯನ್ನು ಹೊಂದಿದೆ. ಇದೇ ಸೌಹಾರ್ದ ಪರಂಪರೆಗೆ ಮತ್ತಷ್ಟು ಮೆರುಗು ನೀಡುವಂತೆ ಹಿಂದೂ ಮಹಾಗಣಪತಿ ಉತ್ಸವದಲ್ಲಿ ಮುಸ್ಲಿಂ ಬಾಂಧವರು ದಾಸೋಹ ಸೇವೆಯಲ್ಲಿ ಭಾಗವಹಿಸಿರುವುದು ನಗರದ ಸೌಹಾರ್ದ ವಾತಾವರಣವನ್ನು ಮತ್ತಷ್ಟು ಗಟ್ಟಿಗೊಳಿಸಿದೆ.

ಉತ್ಸವದ ಸಂದರ್ಭದಲ್ಲಿ ಮುಸ್ಲಿಂ ಬಾಂಧವರು ದಾಸೋಹದಲ್ಲಿ ಪಾಲ್ಗೊಂಡು ಊಟ ಬಡಿಸುವ ಮೂಲಕ "ನಮ್ಮ ಧರ್ಮಗಳು ಬೇರೆ ಇರಬಹುದು, ಆದರೆ ನಮ್ಮ ಮಾನವೀಯತೆ ಒಂದೇ" ಎಂಬ ಭಾವನೆಯನ್ನು ಸಾರಿದರು. ಪರಸ್ಪರರ ಧಾರ್ಮಿಕ ಭಾವನೆಗಳಿಗೆ ಗೌರವ ನೀಡುವುದು, ಹಬ್ಬ?ಹರಿದಿನಗಳನ್ನು ಸೌಹಾರ್ದತೆಯಿಂದ ಆಚರಿಸುವುದು ಹಾಗೂ ಸಮಾಜದಲ್ಲಿ ಶಾಂತಿ ಮತ್ತು ಸಹಬಾಳ್ವೆಯನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂಬ ಸಂದೇಶವೂ ಈ ಸಂದರ್ಭದಲ್ಲಿ ಮೂಡಿಬಂತು.

ದಾಸೋಹದಂತಹ ಸೇವಾ ಕಾರ್ಯಗಳು ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಹಸಿದವರಿಗೆ ಅನ್ನ ನೀಡುವುದು, ಸಂಕಷ್ಟದಲ್ಲಿರುವವರಿಗೆ ನೆರವಾಗುವುದು, ಯಾವುದೇ ಧರ್ಮ ಅಥವಾ ಜಾತಿಯ ಭೇದವಿಲ್ಲದೆ ಸೇವೆ ಸಲ್ಲಿಸುವುದು ಭಾರತೀಯ ಸಂಸ್ಕೃತಿಯಲ್ಲಿರುವ ಸೇವಾ ಮನೋಭಾವದ ಪ್ರತೀಕವಾಗಿದೆ. ಈ ಹಿನ್ನೆಲೆಯಲ್ಲಿ ಮುಸ್ಲಿಂ ಬಾಂಧವರು ಹಿಂದೂ ಮಹಾಗಣಪತಿ ಉತ್ಸವದ ದಾಸೋಹದಲ್ಲಿ ಭಾಗವಹಿಸಿ ಅನ್ನ ಬಡಿಸಿರುವುದು ಸೌಹಾರ್ದತೆಗೆ ಮಾದರಿಯಾಗಿದೆ.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖಂಡರು ಹಾಗೂ ಯುವಕರು, ಸಿಂಧನೂರಿನ ಭಾವೈಕ್ಯತೆ ಮತ್ತು ಸೌಹಾರ್ದ ಪರಂಪರೆ ಮುಂದಿನ ಪೀಳಿಗೆಗೂ ಮುಂದುವರಿಯಬೇಕು. ಧರ್ಮದ ಹೆಸರಿನಲ್ಲಿ ಯಾವುದೇ ಭೇದಭಾವಕ್ಕೆ ಅವಕಾಶ ನೀಡದೆ, ಪರಸ್ಪರ ಗೌರವ ಮತ್ತು ವಿಶ್ವಾಸದೊಂದಿಗೆ ಎಲ್ಲರೂ ಒಂದಾಗಿ ಬದುಕಬೇಕು ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಹಬ್ಬ?ಹರಿದಿನಗಳು ಕೇವಲ ಧಾರ್ಮಿಕ ಆಚರಣೆಗಳಾಗಿ ಉಳಿಯದೆ, ಸಮಾಜದ ವಿವಿಧ ಸಮುದಾಯಗಳ ಜನರನ್ನು ಒಂದೆಡೆ ಸೇರಿಸುವ ಅವಕಾಶಗಳಾಗಬೇಕು. ಒಬ್ಬರ ಸಂತೋಷದಲ್ಲಿ ಮತ್ತೊಬ್ಬರು ಭಾಗಿಯಾಗುವುದು, ಪರಸ್ಪರರ ಹಬ್ಬಗಳಿಗೆ ಶುಭ ಕೋರುವುದು ಹಾಗೂ ಸಾಧ್ಯವಾದಲ್ಲಿ ಸೇವಾ ಕಾರ್ಯಗಳಲ್ಲಿ ಕೈಜೋಡಿಸುವುದರಿಂದ ಸಮಾಜದಲ್ಲಿ ಸ್ನೇಹ ಮತ್ತು ವಿಶ್ವಾಸ ಮತ್ತಷ್ಟು ಬಲಗೊಳ್ಳುತ್ತದೆ.

ಹಿಂದೂ ಮಹಾಗಣಪತಿ ಉತ್ಸವದ ಸಂಭ್ರಮದ ನಡುವೆ ಮುಸ್ಲಿಂ ಬಾಂಧವರು ದಾಸೋಹದಲ್ಲಿ ಕೈಜೋಡಿಸಿ ಸಾರ್ವಜನಿಕರಿಗೆ ಊಟ ಬಡಿಸಿದ ಕ್ಷಣವು ಸಿಂಧನೂರಿನ ಸೌಹಾರ್ದತೆ, ಸಹಬಾಳ್ವೆ ಹಾಗೂ ಭಾವೈಕ್ಯತೆಯ ಪ್ರತೀಕವಾಗಿ ಕಂಡುಬಂದಿತು. ಧರ್ಮ ಬೇರೆ?ಬೇರೆ ಆದರೂ ಮನುಷ್ಯತ್ವ ಒಂದೇ ಎಂಬ ಸಂದೇಶವನ್ನು ಸಾರಿದ ಈ ಅನ್ನಸೇವೆಯ ಕಾರ್ಯವು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

"ಅನ್ನದಾನ ಶ್ರೇಷ್ಠದಾನ ?ಮಾನವೀಯತೆ ಮಹಾನ್" ಎಂಬ ಆಶಯದೊಂದಿಗೆ ನಡೆದ ಈ ದಾಸೋಹ ಕಾರ್ಯಕ್ರಮವು ಸಿಂಧನೂರಿನ ಸಾಮಾಜಿಕ ಸಾಮರಸ್ಯಕ್ಕೆ ಮತ್ತೊಂದು ಅರ್ಥಪೂರ್ಣ ಅಧ್ಯಾಯವನ್ನು ಸೇರಿಸಿತು. ಇಂತಹ ಸೌಹಾರ್ದಯುತ ಕಾರ್ಯಕ್ರಮಗಳು ಸಮಾಜದಲ್ಲಿ ಶಾಂತಿ, ಪ್ರೀತಿ, ವಿಶ್ವಾಸ ಮತ್ತು ಸಹೋದರತ್ವವನ್ನು ಮತ್ತಷ್ಟು ಗಟ್ಟಿಗೊಳಿಸಲಿ ಎಂಬ ಆಶಯ ಸಾರ್ವಜನಿಕರಿಂದ ವ್ಯಕ್ತವಾಯಿತು. ಈ ಸಂದರ್ಭದಲ್ಲಿ ಮುಸ್ಲಿಂ ಸಮುದಾಯದ ಎಲ್ಲಾ ಹಿರಿಯರು ಹಾಗೂ ಯುವಕರು ಉತ್ಸಾಹದಿಂದ ಪಾಲ್ಗೊಂಡು ಸೇವೆ ಸಲ್ಲಿಸಿದರು



ಹೆಣ್ಣುಮಕ್ಕಳ ಸುರಕ್ಷತೆಗೆ ಆತ್ಮರಕ್ಷಣೆ ತರಬೇತಿ

ಆತ್ಮರಕ್ಷಣೆಯ ಕಲೆ ಕಲಿತು ಧೈರ್ಯವಾಗಿ ಮುನ್ನಡೆಯಿರಿ ಗೌರಮ್ಮ ಕುಡತನಿ

ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಹೆಣ್ಣುಮಕ್ಕಳು ಧೈರ್ಯವಾಗಿ ಓಡಾಡಲು ಹಾಗೂ ಅನಿರೀಕ್ಷಿತ ಸಂದರ್ಭಗಳನ್ನು ಎದುರಿಸಲು ಆತ್ಮರಕ್ಷಣೆಯ ಕಲೆ ಕಲಿಯುವುದು ಅಗತ್ಯ ಎಂದು ಇನರ್ ವ್ಹೀಲ್ ಕ್ಲಬ್ ಕುಷ್ಟಗಿ ಅಧ್ಯಕ್ಷೆ ಗೌರಮ್ಮ ಕುಡತನಿ ಹೇಳಿದರು.



ಇನರ್ ವ್ಹೀಲ್ ಕ್ಲಬ್ ಕುಷ್ಟಗಿ ವತಿಯಿಂದ ಅನ್ನದಾನೇಶ್ವರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರಿಗಾಗಿ ಆಯೋಜಿಸಿದ್ದ ಕರಾಟೆ ಹಾಗೂ ಆತ್ಮರಕ್ಷಣಾ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕರಾಟೆ ಬ್ಲಾಕ್ ಬೆಲ್ಟ್ ಮಾಸ್ಟರ್‌ಗಳಾದ ಮೌನೇಶ್ ಕೊಪ್ಪರ್ ಹಾಗೂ ವಿಠಲ್ ಅವರು ವಿದ್ಯಾರ್ಥಿನಿಯರಿಗೆ ದಿನನಿತ್ಯದ ಸಂದರ್ಭಗಳಲ್ಲಿ ಉಪಯುಕ್ತವಾಗುವ ವಿವಿಧ ಆತ್ಮರಕ್ಷಣಾ ತಂತ್ರಗಳನ್ನು ಪ್ರಾಯೋಗಿಕವಾಗಿ ಕಲಿಸಿದರು.

ವಿದ್ಯಾರ್ಥಿನಿಯರಿಗೆ ತರಬೇತಿಗೆ ಅವಕಾಶ ಕಲ್ಪಿಸಿದ ಕಾಲೇಜಿನ ಪ್ರಾಂಶುಪಾಲ ಶ್ರೀಕಾಂತ್ ಪಾಟೀಲ್ ಅವರಿಗೆ ಕ್ಲಬ್ ವತಿಯಿಂದ ಕೃತಜ್ಞತೆ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಕ್ಲಬ್ ಅಧ್ಯಕ್ಷೆ ಗೌರಮ್ಮ ಕುಡತನಿ, ಕಾರ್ಯದರ್ಶಿ ಶ್ರೀದೇವಿ ಮಸ್ಕಿಮಠ್, ಜಿಲ್ಲಾ ಕಾರ್ಯದರ್ಶಿ ಡಾ. ಪಾರ್ವತಿ ಪಳೋಟಿ, ಎಡಿಟರ್ ಶಾರದಾ ಶೆಟ್ಟರ್, ಸದಸ್ಯರಾದ ಸುಮಿತ್ರಾ ಕಂಠಿ, ಗಿರಿಜಾ ನಾಗೋಡ, ಶಿವಲೀಲಾ, ಮೇಘನಾಪುರ, ಶಿವಲೀಲಾ ಹಿರೇಮಠ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಿದ್ಯಾರ್ಥಿನಿಯರ ಆತ್ಮವಿಶ್ವಾಸ ಹಾಗೂ ಸುರಕ್ಷತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮುಂದಿನ ತಿಂಗಳಿನಿಂದ ಬೆಲ್ಟ್‌ವಾರು ಆತ್ಮರಕ್ಷಣಾ ತರಬೇತಿ ತರಗತಿಗಳನ್ನು ಮುಂದುವರಿಸಲು ನಿರ್ಧರಿಸಲಾಯಿತು.

ಕೋಟಿ ದಾಟಿದ ಶೇರು ಬಂಡವಾಳ: ಕಂಪ್ಲಿ ಕೃಷಿ ಪತ್ತಿನ ಸಹಕಾರ ಸಂಘದಿಂದ ಭರ್ಜರಿ ಪ್ರಗತಿ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ಪಟ್ಟಣದ ಹೊಸ ಬಸ್ ನಿಲ್ದಾಣದ ಮುದ್ದಾಪುರ ಅಗಸಿಯಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಕಚೇರಿ ಆವರಣದಲ್ಲಿ 47ನೇ ವಾರ್ಷಿಕ ಮಹಾಜನ ಸಭೆ ಶುಕ್ರವಾರ ನಡೆಯಿತು.



ನಂತರ ಮುಖ್ಯಕಾರ್ಯನಿರ್ವಾಹಕ ಹೆಚ್.ಈರಣ್ಣ ವಾರ್ಷಿಕ ವರದಿ ಮಂಡಿಸಿ ಮಾತನಾಡಿ, ಸಂಘವು 4068 ಜನ ಸದಸ್ಯರಿದ್ದು, ಇದರಲ್ಲಿ ಸುಮಾರು 1 ಕೋಟಿ 32 ಲಕ್ಷ 85ಸಾವಿರ 200 ರೂ.ಗಳ ಶೇರು ಬಂಡವಾಳ ಹೊಂದಿದೆ. 7 ಕೋಟಿ 19 ಲಕ್ಷ 84ಸಾವಿರ ಕೆಸಿಸಿ ಅಲ್ಪಾವಧಿ ಸಾಲ, 1 ಕೋಟಿ 69 ಲಕ್ಷ 98 ಸಾವಿರ ಬಿಡಿಪಿ ಸಾಲ, 10 ಜನರಿಗೆ 36 ಲಕ್ಷ ಪಂಪ್‌ಸೆಟ್ ಸಾಲ, 5 ಲಕ್ಷ ಸ್ವಸಹಾಯಕ ಗುಂಪಿಗೆ ಸಾಲ, 2025–26ನೇ ಸಾಲಿನಲ್ಲಿ ಸಂಘವು ಆಡಿಟ್ ವರ್ಗೀಕರಣದಲ್ಲಿ "ಎ"ಗ್ರೇಡ್ ಸಾಧನೆ ಮಾಡಿದೆ. ಸುಮಾರು 1 ಕೋಟಿ 47 ಲಕ್ಷ 64 ಸಾವಿರ 799 ರೂ.ಗಳ ರಸಗೊಬ್ಬರ ವ್ಯವಹಾರ ನಡೆಸಿ, 24 ಲಕ್ಷ 16 ಸಾವಿರ 656 ರೂ.ಗಳ ವ್ಯಾಪಾರ ಲಾಭಗಳಿಸಿದೆ. ಸಂಘದಲ್ಲಿ 2,84,64,722 ರೂ.ಗಳ ಠೇವಣಿ ಇರುತ್ತದೆ. 2025–26ನೇ ಸಾಲಿನಲ್ಲಿ ಸಂಘವು 12 ಲಕ್ಷ 40 ಸಾವಿರ 374 ನಿವ್ವಳ ಲಾಭ ಹೊಂದಿದೆ.


ಸಂಘದ ಅಭಿವೃದ್ಧಿಗೆ ಪ್ರತಿಯೊಂದು ಹಂತದಲ್ಲಿ ಸಂಘದ ಆಡಳಿತ ಮಂಡಳಿಯವರು, ರೈತರು, ಮುಖಂಡರು ಸಹಕಾರ ನೀಡುತ್ತಾ ಬಂದಿದ್ದು, ಇದೇ ತರನಾಗಿ ಸಹಕರಿಸಿ, ಮತ್ತಷ್ಟು ಅಭಿವೃದ್ಧಿಗೆ ಕೈಜೋಡಿಸಬೇಕು ಎಂದರು. ಸಂಘದ ಅಧ್ಯಕ್ಷ ಬಿ. ಬಸವರಾಜ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಗಂಗಣ್ಣ ತಳವಾರ, ನಿರ್ದೇಶಕರಾದ ಕಟ್ಟೆ ಸಣ್ಣ ದುರುಗಪ್ಪ, ಅಳ್ಳಿ ನಾಗರಾಜ, ಈರಪ್ಪ ಜೋಳಮಾರ, ಬಳೆ ಮಲ್ಲಿಕಾರ್ಜುನ, ಟಿ.ನಿರಂಜನಯ್ಯ, ಸಣ್ಣಪ್ಪ ಎಸ್, ರಾಜೇಶ ಶೆರೆಗಾರ, ಕೃಷ್ಣ ಕೆ, ವಿಶಾಲಾಕ್ಷಿ ಬಿ.ಎಂ, ಕೆ. ನಾಗಮ್ಮ, ವಿ. ರಾಮಚಂದ್ರ(ಕ್ಷೇತ್ರ ಅಧಿಕಾರಿ), ಸಿಬ್ಬಂದಿಗಳಾದ ಕೆ.ಪ್ರಕಾಶ, ಹೆಚ್.ಪರಶುರಾಮ, ಎನ್.ಮಂಜುನಾಥ, ಕೆ.ಭರತ್, ಯು.ಮಂಜುನಾಥ, ಹೆಚ್.ಸಿದ್ದೇಶ, ಪಣಿ ಸೋಮಪ್ಪ ಸೇರಿದಂತೆ ಮುಖಂಡರು, ರೈತರು ಇದ್ದರು.

ನೆಲೆ ಇಲ್ಲದ ಗದಗ ಜಿಲ್ಲೆಯ ಶಂಕ್ರಮ್ಮ ವೃದ್ಧೆಗೆ ಆಸರೆಯಾದ ಸಿಂಧನೂರಿನ ಕಾರುಣ್ಯ ಕುಟುಂಬ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಗದಗ ಜಿಲ್ಲೆಯ ಗಜೇಂದ್ರಗಡ ತಾಲೂಕಿನ ಶಾಂತಗೇರಿ ಗ್ರಾಮದಲ್ಲಿ ಸುಮಾರು ವರ್ಷಗಳಿಂದ ವಾಸವಾಗಿದ್ದ ಯಾರು ಇಲ್ಲದ ಶಂಕ್ರವ್ವ ಗಂ. ದಿ. ಪುಂಡಲಿಕಪ್ಪ ಗುಳಗುಳಿ ವಯಸ್ಸು –65 ಅನಾರೋಗ್ಯ ಸ್ಥಿತಿಯಲ್ಲಿರುವ ಅಂಧಳಾದ ಇವರಿಗೆ ಸಿಂಧನೂರಿನ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಇವರಿಗೆ ಮಕ್ಕಳು ಮತ್ತು ಕುಟುಂಬವಿಲ್ಲದ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಆಶ್ರಯ ನೀಡಲಾಯಿತು.



ಈ ಸಮಯದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ಇಂದು ಆಶ್ರಯ ಕಲ್ಪಿಸಿರುವ ಶಾಂತಮ್ಮನವರು ಅಂಧರಾಗಿದ್ದು ಇವರ ಗಂಡನು ಸುಮಾರು ವರ್ಷಗಳ ಹಿಂದೆ ಮರಣ ಹೊಂದಿದ್ದು ಈ ತಾಯಿಗೆ ಕುಟುಂಬ ಇಲ್ಲದ ಮಾಹಿತಿಯ ಮೇರೆಗೆ ನಾವು ಆಶ್ರಯ ಕಲ್ಪಿಸಿ ಕೊಟ್ಟಿದ್ದೇವೆ. ಇಂತಹ ನೆಲೆ ಇಲ್ಲದ ನೊಂದ ಜೀವಿಗಳ ಸೇವೆ ಮಾಡುವುದೇ ಕಾರುಣ್ಯ ಕುಟುಂಬದ ಮೂಲ ಉದ್ದೇಶವಾಗಿದೆ. ಎಲ್ಲಾ ಕಾರ್ಯಗಳಿಗೆ ದಾನಿಗಳೇ ಬಹುದೊಡ್ಡ ಶಕ್ತಿಯಾಗಿ ಅಂಧ–ಅನಾಥರ ಬಾಳಿಗೆ ಬೆಳಕಾಗಿದ್ದಾರೆ. ಗದುಗಿನ ಡಾ. ಪಂಡಿತ ಪುಟ್ಟರಾಜ ಗವಾಯಿಗಳ ನೆಲದಲ್ಲಿ ಹುಟ್ಟಿದ ಈ ಅಂಧ ತಾಯಿಯ ಸೇವೆ ಮಾಡುವುದೇ ನಮ್ಮ ಪೂರ್ವಜನ್ಮದ ಪುಣ್ಯ ನಮ್ಮ ಈ ಸೇವೆಗೆ ಹಲವಾರು ಟೀಕೆ ಟಿಪ್ಪಣಿಗಳು ಅವಮಾನ ಅಪಪ್ರಚಾರಗಳೇ ನಮ್ಮ ಸೇವೆಗೆ ಸ್ಫೂರ್ತಿಯಾಗಿವೆ. ನಮ್ಮ ಈ ಸೇವೆಗೆ ಒಳಬಳ್ಳಾರಿಯ ಲಿಂಗೈಕ್ಯ ಶ್ರೀ ಮ ನಿ.ಪ್ರ.ಚನ್ನಬಸವ ಮಹಾಶಿವಯೋಗಿಗಳ ಆಶೀರ್ವಾದದೊಂದಿಗೆ ದಾನಿಗಳ ಸಹಾಯ ಸಹಕಾರದೊಂದಿಗೆ ಕಾರುಣ್ಯ ಆಶ್ರಮದ ಬದುಕು ಸಾಗುತ್ತಿದೆ. ನಾಡಿನ ಜನರಲ್ಲಿ ಸೇವೆ ನಮಗಿರಲಿ ಪುಣ್ಯ ನಿಮಗಿರಲಿ ಎನ್ನುವ ನಿತ್ಯ ಪ್ರಾರ್ಥನೆ ಕಾರುಣ್ಯ ಕುಟುಂಬದ್ದು ಈ ಕಾರುಣ್ಯ ಕರ್ಮ ಭೂಮಿಯ ಕಂದಮ್ಮಗಳಿಗೆ ಈ ಆಶ್ರಮಕ್ಕೆ ಸಹಾಯಮಾ ಸಹಕಾರ ಮಾಡುವ ಮಹಾದಾನಿಗಳೇ ನಮ್ಮ ನಡೆದಾಡುವ ದೇವರುಗಳಾಗಿದ್ದಾರೆ. ಇತ್ತೀಚೆಗೆ ಆಶ್ರಮದ ಆಶ್ರಯದಾತರುಗಳ ಸಂಖ್ಯೆ ಹೆಚ್ಚಾಗುತ್ತಿರುವುದರಿಂದ ಆಶ್ರಮದ ನಿರ್ವಹಣೆ ಬಹಳ ಕಷ್ಟದಲ್ಲಿ ನಡೆಯುತ್ತಿದೆ.

ಆದ್ದರಿಂದ ತಾವುಗಳು ಆಶ್ರಮಕ್ಕೆ ಖುದ್ದು ಬೇಟಿ ನೀಡಿ ಸಹಾಯ ಮಾಡಲು ವಿನಂತಿಸಿಕೊಳ್ಳುತ್ತಿದ್ದೇವೆ ಎಂದು ಭಾವನಾತ್ಮಕವಾಗಿ ಮಾತನಾಡಿ ಶಂಕ್ರಮ್ಮ ಅವರಿಗೆ ಆಶ್ರಯ ಕಲ್ಪಿಸಿ ಕೊಟ್ಟರು. ಈ ಸಮಯದಲ್ಲಿ ಆಶ್ರಮದ ಸಂಸ್ಥಾಪಕರಾದ ವೇದಮೂರ್ತಿ ಅಮರಯ್ಯ ಸ್ವಾಮಿ ಹಿರೇಮಠ ಹರೇಟನೂರು ಪ್ರಕಾಶ ತಂ. ಶಾಂತಪ್ಪ ಮುಶಿಗೇರಿ ಸಿಬ್ಬಂದಿಗಳು ಗ್ರಾ ಪಂ. ಕಾರ್ಯಾಲಯ ಶಾಂತಗೇರಿ. ಶರಣಪ್ಪ ತಂ. ಗುರುಬಸಪ್ಪ ಮುಶಿಗೇರಿ ನಿವೃತ್ತ ಬಿ.ಎಸ್.ಎಫ್. ಅಧಿಕಾರಿಗಳು ಶಾಂತಮ್ಮ ಗಂ.ಯಮನೂರಪ್ಪ ಹಾಗೂ ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ. ಮಹಾಂತೇಶ ದೋಟಿಹಾಳ. ಶರಣು ಸ್ವಾಮಿ ಬಸವ ಸ್ವಾಮಿ ಅನೇಕರು ಉಪಸ್ಥಿತರಿದ್ದರು.

ಸಾಹಿತ್ಯ ಸಿಂಚನ

ನಕ್ಷತ್ರವಾಗುವ ಆಸೆ

ಆಕಾಶದ ನೀಲಿಯಲ್ಲಿ ಮಿನುಗುವ ನಕ್ಷತ್ರವಾಗಿ,
ಕನಸುಗಳ ದಾರಿಯಲ್ಲಿ ಸಾಗುವ ಆಸೆಯಾಗಿ.
ಕತ್ತಲೆಯ ನಡುವೆ ಬೆಳಕಾಗಿ ಹೊಳೆಯಬೇಕು,
ನನ್ನದೇ ಗುರುತನ್ನು ಜಗದಲಿ ಮೂಡಿಸಬೇಕು.

ಸಣ್ಣ ಕನಸೊಂದು ಹೃದಯದಲ್ಲಿ ಹುಟ್ಟಿ,
ದೊಡ್ಡ ಗುರಿಯೊಂದು ಕಣ್ಣಲ್ಲಿ ಬೆಳೆದು,
ಬಿದ್ದರೂ ಮತ್ತೆ ಎದ್ದು ನಿಲ್ಲಬೇಕು,
ಸೋಲಿನ ನೆರಳನ್ನೂ ಗೆದ್ದು ನಡೆಯಬೇಕು.

ಮೋಡಗಳು ಬಂದರೂ ಬೆಳಕು ನಿಲ್ಲದು,
ಗಾಳಿ ಬೀಸಿದರೂ ದೀಪವು ಆರದು.
ನನ್ನೊಳಗಿನ ಭರವಸೆಯ ಕಿರಣದಿಂದ,
ಹೊಸ ದಾರಿಯೊಂದನ್ನು ಹುಡುಕಬೇಕು.

ಯಾರಿಗೂ ಕಾಣದ ಕತ್ತಲೆಯಲ್ಲೂ,
ನನ್ನ ಕನಸು ಮಿನುಗುತ್ತಿರಬೇಕು.
ದೂರದ ಆಕಾಶದ ನಕ್ಷತ್ರದಂತೆ,
ನನ್ನ ಬದುಕು ಅರ್ಥಪೂರ್ಣವಾಗಬೇಕು.

ಹೆಸರಿಗಾಗಿ ಅಲ್ಲ, ಬೆಳಕಿಗಾಗಿ,
ಜಗತ್ತಿಗೆ ಒಳ್ಳೆಯದಾಗುವ ಹಂಬಲಕ್ಕಾಗಿ,
ಒಂದು ದಿನ ಆಕಾಶದತ್ತ ನೋಡಿ,
"ನಾನೂ ನಕ್ಷತ್ರವಾದೆ" ಎಂದು ನಗಬೇಕು

ಗ್ರಾಹಕರ ಹಣಕಾಸು ವ್ಯವಹಾರಕ್ಕೆ ಸಿಬ್ಬಂದಿ ಸಹಕರಿಸಲಿ: ನಾರಾಯಣಗೌಡ ಮೆದಿಕೇರಿ

❏ ನೈಜ್ಯ ದೆಸೆ ನ್ಯೂಸ್

ತಾವರಗೇರಾ: ಸಹಕಾರಿ ಸಂಘದಲ್ಲಿ ಉಳಿತಾಯ ಖಾತೆ ತೆರೆದು ಸಾಲ ಪಡೆದ ಗ್ರಾಹಕರು ಸಾಲದ ಹಣವನ್ನು ಯಾವ ರೀತಿಯಲ್ಲಿ ಬಳಸುತ್ತಿದ್ದಾರೆ ಹಾಗೂ ಅದರಿಂದ ಅವರ ಆರ್ಥಿಕ ಸ್ಥಿತಿಗೆ ಎಷ್ಟು ಸಹಾಯವಾಗಿದೆ ಎಂಬುದನ್ನು ತಿಳಿದುಕೊಳ್ಳಬೇಕು. ಗ್ರಾಹಕರು ಸಂಘದೊಂದಿಗೆ ನಿರಂತರವಾಗಿ ವ್ಯವಹರಿಸುವಂತೆ ಸಿಬ್ಬಂದಿ ಅಗತ್ಯ ಸಹಕಾರ ನೀಡಬೇಕು ಎಂದು ಪಟ್ಟಣ ಪಂಚಾಯಿತಿ ಅಧ್ಯಕ್ಷ ನಾರಾಯಣಗೌಡ ಮೆದಿಕೇರಿ ಹೇಳಿದರು.

ಪಟ್ಟಣದಲ್ಲಿ ಗುರುವಾರ ನಡೆದ ಶರಣು ಸೌಹಾರ್ದ ಸಹಕಾರಿ ಸಂಘದ 3ನೇ ವರ್ಷದ ವಾರ್ಷಿಕ ಮಹಾಸಭೆಯಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.



ನಂತರ ಸಿಂಡಿಕೇಟ್ ಬ್ಯಾಂಕ್ ನಿವೃತ್ತ ಹಾಗೂ ಆರ್‌ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ವ್ಯವಸ್ಥಾಪಕ ಗೋವಿಂದರಾಜ ಹುಲಿಹೈದರ್ ಚಿನ್ನಪ್ಪ ಮಾತನಾಡಿದರು. ಸಂಘದಲ್ಲಿ ಉತ್ತಮ ಹಣಕಾಸು ವ್ಯವಹಾರ ನಡೆಸಿದ ಗ್ರಾಹಕರು ಹಾಗೂ ಸಲಹೆಗಾರರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಸಂಘದ ಅಧ್ಯಕ್ಷ ಶ್ಯಾಮಣ್ಣ ಕೈಲವಾಡಗಿ ಹಾಗೂ ಉಪಾಧ್ಯಕ್ಷ ಹನಮೇಶಗೌಡ ಮೆದಿಕೇರಿ ಮಾತನಾಡಿದರು. ಮುಖ್ಯ ಕಾರ್ಯನಿರ್ವಾಹಕಿ ಅನುಷಾ ವಾರ್ಷಿಕ ವರದಿ ವಾಚಿಸಿದರು. ನಿರ್ದೇಶಕಿ ಶಕೀಲಾ ಶೆಟ್ಟಿ ಹಾಗೂ ಅನುಷಾ ಪ್ರಾರ್ಥಿಸಿದರು. ಲಕ್ಷ್ಮಣಸಿಂಗ್ ವಗರನಾಳ ನಿರೂಪಿಸಿದರು. ಸಭೆಯಲ್ಲಿ ಸಂತೋಷ ಉಪ್ಪಳ, ಶ್ಯಾಮಣ್ಣ ನಿಡಶೇಸಿ, ಸರಸ್ವತಿ ಗುಡಸಲಿ ಸೇ-ರಿದಂತೆ ಸಂಘದ ನಿರ್ದೇಶಕರು, ಗ್ರಾಹಕರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಗಾಣಧಾಳ ಗ್ರಾಮದ ಸಮಗ್ರ ಅಭಿವೃದ್ಧಿಗೆ ಸಂಸದರಿಗೆ ಮನವಿ

ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ MPLAಆ ನಿಧಿ ಸೇರಿದಂತೆ ಸೂಕ್ತ ಅನುದಾನ ಒದಗಿಸಲು ಆಗ್ರಹ

❏ ನೈಜ್ಯ ದೆಸೆ ನ್ಯೂಸ್

ಅರಕೇರಾ: ರಾಯಚೂರು ಜಿಲ್ಲೆಯ ಅರಕೇರಾ ತಾಲೂಕಿನ ಗಾಣಧಾಳ ಗ್ರಾಮದಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಿನ್ನೆಲೆಯಲ್ಲಿ ಗ್ರಾಮದ ಸಮಗ್ರ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದರಿಗೆ ಮನವಿ ಸಲ್ಲಿಸಲಾಗಿದೆ.

ಗ್ರಾಮದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಒದಗಿಸುವಂತೆ ಗ್ರಾಮದ ಮುಖಂಡರಾದ ಶಿವರಾಜ್ ತಂದೆ ಲಿಂಗಣ್ಣ ಗಾಣದಾಳ್, ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಸದಸ್ಯರು ಹಾಗೂ ರಾಯಚೂರು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಪ್ರಧಾನ ಕಾರ್ಯದರ್ಶಿಗಳು, ಸಂಸದ-ರಿಗೆ ಮನವಿ ಸಲ್ಲಿಸಿ ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದ್ದಾರೆ.

ಪ್ರಮುಖ ಬೇಡಿಕೆಗಳು

ಸಾರ್ವಜನಿಕ ಶೌಚಾಲಯ ನಿರ್ಮಾಣ: ಗಾಣಧಾಳ ಗ್ರಾಮದ ಬಸ್ ನಿಲ್ದಾಣ ಹಾಗೂ ಮಾರುಕಟ್ಟೆ ಪ್ರದೇಶದಲ್ಲಿ ಸಾರ್ವಜನಿಕ-ರಿಗೆ, ವಿಶೇಷವಾಗಿ ಮಹಿಳೆಯ-ರಿಗೆ ಅನುಕೂಲವಾಗುವಂತೆ ಸುಸಜ್ಜಿತ ಸಾರ್ವಜನಿಕ ಶೌಚಾಲಯ ನಿರ್ಮಿಸಬೇಕು.



ಸರ್ಕಾರಿ ಕಾಲೇಜು ಸ್ಥಾಪನೆ: ಗಾಣಧಾಳ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳಿಗೆ ಪದವಿ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ಗ್ರಾಮದಲ್ಲೇ ಸರ್ಕಾರಿ ಕಾಲೇಜು ಸ್ಥಾಪಿಸಬೇಕು.

300 ವರ್ಷಗಳ ಹಳೆಯ ಕೋಟೆ ಅಭಿವೃದ್ಧಿ: ಗ್ರಾಮದ ಐತಿಹಾಸಿಕ ಮಹತ್ವ ಹೊಂದಿರುವ ಸುಮಾರು 300 ವರ್ಷಗಳ ಹಳೆಯ ಕೋಟೆಯನ್ನು ಸಂರಕ್ಷಿಸಿ ಅಭಿವೃದ್ಧಿಪಡಿಸಬೇಕು. ಕೋಟೆಯ ಐತಿಹಾಸಿಕ ಹಿನ್ನೆಲೆ ಹಾಗೂ ಪ್ರವಾಸೋದ್ಯಮದ ಸಾಧ್ಯತೆಗಳನ್ನು ಪರಿಗಣಿಸಿ ಕೋಟೆ ಆವರಣದ ಸಂರಕ್ಷಣೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ವಿದ್ಯಾರ್ಥಿಗಳಿಗಾಗಿ ವಸತಿ ನಿಲಯ: ಗಾಣಧಾಳ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿದ್ಯಾರ್ಥಿಗಳಿಗೆ, ವಿಶೇಷವಾಗಿ ಹೆಣ್ಣುಮಕ್ಕಳಿಗೆ ಅನುಕೂಲವಾಗುವಂತೆ ಸುರಕ್ಷಿತ ವಿದ್ಯಾರ್ಥಿ ವಸತಿ ನಿಲಯ ನಿರ್ಮಿಸಬೇಕು.

ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ: ಗ್ರಾಮದಲ್ಲಿ ಹಲವು ವರ್ಷಗಳಿಂದ ಮುಂದುವ-ರಿದಿರುವ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿ, ಗ್ರಾಮಸ್ಥ-ರಿಗೆ ಶುದ್ಧ ಹಾಗೂ ಸಮರ್ಪಕ ಕುಡಿಯುವ ನೀರು ಪೂರೈಸುವ ವ್ಯವಸ್ಥೆ ಮಾಡಬೇಕು. ಗ್ರಾಮದ ಶೈಕ್ಷಣಿಕ ಅಭಿವೃದ್ಧಿ, ಮೂಲಭೂತ ಸೌಕರ್ಯಗಳ ವೃದ್ಧಿ, ಕುಡಿಯುವ ನೀರಿನ ಸಮಸ್ಯೆ ನಿವಾರಣೆ ಹಾಗೂ ಐತಿಹಾಸಿಕ ಪರಂಪರೆಯ ಸಂರಕ್ಷಣೆ ದೃಷ್ಟಿಯಿಂದ ಈ ಬೇಡಿಕೆಗಳು ಅತ್ಯಂತ ಅಗತ್ಯವಾಗಿವೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಷಸಂಬಂಧಪಟ್ಟ ಇಲಾಖೆಗಳ ಯೋಜನೆಗಳಡಿ ಹಾಗೂ ಸಾಧ್ಯವಿರುವ ಕಡೆ ಸಂಸದರ ಪ್ರದೇಶಾಭಿವೃದ್ಧಿ ನಿಧಿ (MPLAD) ಸೇ-ರಿದಂತೆ ಸೂಕ್ತ ಅನುದಾನ ಒದಗಿಸಿ, ಗಾಣಧಾಳ ಗ್ರಾಮದ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಿ ತುರ್ತು ಕ್ರಮ ಕೈಗೊಳ್ಳಬೇಕೆಂದು ಕಾಂಗ್ರೆಸ್ ಮುಖಂಡ ಶಿವರಾಜ್ ಮನವಿ ಮಾಡಿದ್ದಾರೆ.

ಶಿಕ್ಷಕರ ದೊಡ್ಡ ಗೆಲುವು ವಿದ್ಯಾರ್ಥಿಗಳು ಉತ್ತಮ ವ್ಯಕ್ತಿಗಳಾದಾಗ: ರಾಜಶೇಖರ್

❏ ನೈಜ್ಯ ದೆಸೆ ನ್ಯೂಸ್

ಮಾನ್ವಿ: ಶಿಕ್ಷಕರ ಅತ್ಯಂತ ದೊಡ್ಡ ಗೆಲುವು ಎಂದರೆ ಅವರ ವಿದ್ಯಾರ್ಥಿಗಳು ಸಮಾಜದಲ್ಲಿ ಒಳ್ಳೆಯ ವ್ಯಕ್ತಿಗಳಾಗಿ ಬಾಳುವುದಾಗಿದೆ ಎಂದು ಜಂಬೂ ದ್ವೀಪ ಕನ್ನಡ ದಿನಪತ್ರಿಕೆ ಸಂಪಾದಕರು ಹಾಗೂ ಕಲ್ಮಠ ಶಾಲೆಯ ಹಳೆಯ ವಿದ್ಯಾರ್ಥಿ ರಾಜಶೇಖರ್ ಹೆಚ್. ಹೇಳಿದರು.



ಪಟ್ಟಣದ ಕಲ್ಮಠ ಶಾಲಾ ಆವರಣದಲ್ಲಿ ಶುಕ್ರವಾರ ಆಯೋಜಿಸಿದ್ದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ಮೊಬೈಲ್‌ಗಳು ಹಾಗೂ ಪುಸ್ತಕಗಳಲ್ಲಿ ಎಲ್ಲ ರೀತಿಯ ಮಾಹಿತಿಯೂ ಲಭ್ಯವಿದೆ. ಆದರೆ ವಿದ್ಯಾರ್ಥಿಗಳು ತಪ್ಪು ದಾರಿಯಲ್ಲಿ ಸಾಗುವುದನ್ನು ತಡೆದು, ಸನ್ಮಾರ್ಗದಲ್ಲಿ ಮುನ್ನಡೆಯುವಂತೆ ಮಾರ್ಗದರ್ಶನ ನೀಡುವವರು ಶಿಕ್ಷಕರು. ಕಲ್ಮಠ ವಿದ್ಯಾಸಂಸ್ಥೆಯಲ್ಲಿ ಅಂತಹ ಉತ್ತಮ ಶಿಕ್ಷಕರಿದ್ದು, ವಿದ್ಯಾರ್ಥಿಗಳು ಅವರ ಮಾರ್ಗದರ್ಶನದಲ್ಲಿ ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಉತ್ತಮ ವ್ಯಕ್ತಿಗಳಾಗಿ ಬಾಳಬೇಕು ಎಂದು ಹೇಳಿದರು. ಕಲ್ಮಠ ಶಾಲೆಯ ಹಳೆಯ ವಿದ್ಯಾರ್ಥಿನಿ ಹಾಗೂ ಜಿಎಂಎಚ್‌ಪಿ-ಎಸ್ ಗುಂಜಳ್ಳಿ ಶಾಲೆಯ ಶಿಕ್ಷಕಿ ಹನುಮಂತಮ್ಮ ತಮ್ಮಾಪುರ್ ಮಾತನಾಡಿ, ಶಿಕ್ಷಕರು ಕೇವಲ ಪಾಠ ಬೋಧಿಸುವವರಲ್ಲ, ಬದಲಾಗಿ ಮಕ್ಕಳ ಭವಿಷ್ಯವನ್ನು ರೂಪಿಸುವವರಾಗಿದ್ದಾರೆ. ಶಿಕ್ಷಕರು ಸ್ವತಃ ದೀಪವಾಗಿ ಮಕ್ಕಳಿಗೆ ದಾರಿದೀಪವಾಗುತ್ತಾರೆ ಎಂದರು. ಕಲ್ಮಠ ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಸಂಗಯ್ಯ ಸ್ವಾಮಿ, ಕಲ್ಮಠ ಪ್ರೌಢಶಾಲೆಯ ಮುಖ್ಯ ಗುರು ಪ್ರಭಯ್ಯ ಸ್ವಾಮಿ, ಪ್ರೌಢಶಾಲಾ ಶಾಲಾ ಸಂಸತ್ ಮುಖ್ಯಮಂತ್ರಿ ವೀರೇಶ್, ಪ್ರಾಥ-ಮಿಕ ಶಾಲಾ ಸಂಸತ್ ಮುಖ್ಯಮಂತ್ರಿ ಅನಿಲಕುಮಾರ್ ಸೇ-ರಿದಂತೆ ಸೌಭಾಗ್ಯ, ಪೂಜಾ, ಮಲ್ಲಿಕಾರ್ಜುನ, ಸಾಗರ್ ಹಾಗೂ ಇನ್ನಿತರ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಕಲ್ಮಠ ಪ್ರಾಥಮಿಕ ಶಾಲೆಯ ಮುಖ್ಯ ಗುರು ಮಂಜುನಾಥ ಕಮತರ ಅಧ್ಯಕ್ಷತೆ ವಹಿಸಿದ್ದರು. ಎಂ.ಎಂ. ಹಿರೇಮಠ್, ಕೆಮ್ಮಾನಾಯ್ಕ, ಭ್ರಮರಾಂಬ, ರವಿ ಹುಲಿಯಾಪುರ, ಜಯಶ್ರೀ, ಮಹಾಂತಮ್ಮ, ನರಸಿಂಹಲು, ರಾಘವೇಂದ್ರ, ರೂಪ, ಗೀತಾ, ಪ್ರಭಾವತಿ, ರಿಜ್ವಾನ, ಸೌಮ್ಯ ಸೇರಿದಂತೆ ಇನ್ನಿತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕುಮಾರಿ ಅಪ್ಸಾನ ಬೇಗ ಕಾರ್ಯಕ್ರಮ ನಿರೂಪಿಸಿದರು. ಕುಮಾರ ಮನೋಜಕುಮಾರ್ ಸ್ವಾಗತಿಸಿದರು. ಕುಮಾರಿ ಶೈಲಜಾ ವಂದಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಕಂಪ್ಲಿ: ಗಣೇಶೋತ್ಸವ ನಿಮಿತ್ತ ಹಿಂದೂ ಯುವ ಸೇನೆ ವತಿಯಿಂದ ಉಚಿತ ಆರೋಗ್ಯ ಶಿಬಿರ; 250ಕ್ಕೂ ಹೆಚ್ಚು ಜನರಿಗೆ ತಪಾಸಣೆ

❏ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ /ಕಂಪ್ಲಿ: ಆಧುನಿಕ ಜೀವನದ ಜಂಜಾಟದಲ್ಲಿ ಜನರು ತಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಜಾಗೃತಿ ವಹಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ಕಲ್ಮಠದ ಅಭಿನವ ಪ್ರಭುಸ್ವಾಮಿ ಅವರು ಕರೆ ನೀಡಿದ್ದಾರೆ.

ಪಟ್ಟಣದ ಭಾರತ್ ಚಿತ್ರಮಂದಿರದ ಬಳಿಯಿರುವ ಕೂಲಿಕಟ್ಟೆ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಹಿಂದೂ ಯುವ ಸೇನೆ ವತಿಯಿಂದ, (ಜೆಸಿಐ ಕಂಪ್ಲಿ ಸೋನಾ ಸಹಕಾರ) ಪ್ರತಿಷ್ಠಾಪಿಸಲಾದ ಮಹಾರಾಜ ಗಣಪತಿ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಉದ್ಘಾಟಿಸಿ ಅವರು ವ ಾತನಾಡುತ್ತಿದ್ದರು."ಆರೋಗ್ಯವೇ ಮಹಾಭಾಗ್ಯ" ಎಂಬ ನಾಣ್ಣುಡಿಯಂತೆ ಇಂದಿನ ದಿನಗಳಲ್ಲಿ ಪ್ರತಿಯೊಬ್ಬರೂ ಆರೋಗ್ಯವಂತರಾಗಿರಲು ಹೆಚ್ಚಿನ ಗಮನ ಹರಿಸಬೇಕು ಎಂದು ಅವರು ಆಶಯ ವ್ಯಕ್ತಪಡಿಸಿದರು.



ಶಿಬಿರದ ಅಧ್ಯಕ್ಷತೆ ವಹಿಸಿದ್ದ ಹಿಂದೂ ಯುವ ಸೇನೆ ಅಧ್ಯಕ್ಷ ಶಿವಕುಮಾರ್ ಅಲಬನೂರು ಮಾತನಾಡಿ, ಗಣೇಶೋತ್ಸವದ ನಿಮಿತ್ತ ಸಾರ್ವಜನಿಕರ ಹಿತದೃಷ್ಟಿಯಿಂದ ಹಮ್ಮಿಕೊಂಡಿದ್ದ ಈ ಶಿಬಿರದಲ್ಲಿ 250ಕ್ಕೂ ಹೆಚ್ಚು ಜನರು ಉಚಿತ ತಪಾಸಣೆ ಹಾಗೂ ಉಚಿತ ಔಷಧಿಗಳ ಸದುಪಯೋಗ ಪಡೆದುಕೊಂಡಿದ್ದಾರೆ ಎಂದರು.

ತಪಾಸಣೆ ಶಿಬಿರ ಆರಂಭವಾಗುವ ಮುನ್ನ ಗಣಪತಿ ಪ್ರತಿಷ್ಠಾಪನಾ ಸ್ಥಳದಲ್ಲಿ ವಿಶೇಷ ಪೂಜೆ ಹಾಗೂ ಪುನಸ್ಕಾರಗಳು ನೆರವೇರಿದವು. ಖ್ಯಾತ ವೈದ್ಯರಾದ ಜೆಸಿಐ ಕಂಪ್ಲಿ ಸೋನಾ ಅಧ್ಯಕ್ಷರಾದ ಡಾ. ಭರತ್ ಪದ್ಮಶಾಲಿ, ಡಾ. ಶ್ರದ್ಧಾ ಭರತ್, ಡಾ. ವಿಕ್ರಮ್ ರೈಕರ್, ಡಾ. ಪ್ರವೀಣ್, ಮತ್ತು ಡಾ. ತಸ್ನೀಮ್ ಅವರ ನೇತೃತ್ವದ ತಂಡ ಸಾರ್ವಜನಿಕರ ಆರೋಗ್ಯ ತಪಾಸಣೆ ನಡೆಸಿತು.

ಕಾರ್ಯಕ್ರಮದಲ್ಲಿ ಮುಸ್ಲಿಂ ಧರ್ಮಗುರುಗಳಾದ ಸೈಯದ್ ಷಾ ಮೆಹಮೂದ್ ಖಾದ್ರಿ (ರೈಸ್ ಸಾಹೇಬ್), ಡಾ. ನೂರ್ ಅಹ್ಮದ್ ಖಾದ್ರಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಿ ಸೌಹಾರ್ದತೆಗೆ ಸಾಕ್ಷಿಯಾದರು.

ಆರೋಗ್ಯ ಶಿಬಿರದ ಯಶಸ್ವಿ ಮುಕ್ತಾಯದ ನಂತರ ಸಾರ್ವಜನಿಕರಿಗೆ ಅನ್ನಸಂತಾರ್ಪಣೆ ವ್ಯವಸ್ಥೆಯನ್ನು ಮಾಡಲಾಗಿತ್ತು.


ವೀರಶೈವ ಲಿಂಗಾಯತ ಮಹಾವೇದಿಕೆ ಜಿಲ್ಲಾಧ್ಯಕ್ಷ ಹೊಸಕೋಟೆ ಜಗದೀಶ, ಮುಖಂಡರಾದ ಎಂ. ಸುಧೀರ್, ಎನ್.ಎಂ. ಪತ್ರಯ್ಯಸ್ವಾಮಿ, ಎಂ. ಇಸ್ಮಾಯಿಲ್ ಬೇಗ್, ಅಕ್ಕಿ ಜಿಲಾನ್, ಹಾಗೂ ಹಿಂದೂ ಯುವ ಸೇನೆಯ ಪದಾಧಿಕಾರಿಗಳಾದ ನವೀನ್ ಅಲಬನೂರು, ಸಂತೋಷ್ ಅಲಬನೂರು, ಅವಿನಾಶ್ ಅಲಬನೂರು, ಚೇತನ್ ಆಚಾರ್, ಪ್ರದೀಪ್, ಅಮರೇಗೌಡ ಪಾಟೀಲ್, ಕಾರ್ತಿಕ, ರಾಕೇಶ್, ಹರ್ಷ, ಪುಟ್ಟಿ ರಾಘವೇಂದ್ರ ಸೇರಿದಂತೆ ನೂರಾರು ಭಕ್ತಾದಿಗಳು ಉಪಸ್ಥಿತರಿದ್ದರು.

ರಾಷ್ಟ್ರ ನಾಯಕರ ಭಾವಚಿತ್ರಗಳನ್ನು ಪಾದರಕ್ಷೆ ಬಿಡುವ ಸ್ಥಳದಲ್ಲಿ ಇರಿಸಿ ರಾಷ್ಟ್ರ ನಾಯಕರಿಗೆ ಅವಮಾನ ಮಾಡಿದವರನ್ನು ಅಮಾನತ್ತು ಗೊಳಿಸುವಂತೆ ಕ ದ ಸಂ ಸ ಒತ್ತಾಯ

❏ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಮಸ್ಕಿ ಎಪಿಎಂಸಿ ಕಚೇರಿ ಆವರಣದಲ್ಲಿ ಮಹಾತ್ಮ ಗಾಂಧೀಜಿ, ಡಾ. ಬಿ.ಆರ್. ಅಂಬೇಡ್ಕರ್ ಸರದಾರ ವಲ್ಲಭಾಯಿ ಪಟೇಲ್ ಇನ್ನಿತರರು, ಸೇರಿದಂತೆ ಪ್ರಮುಖ ರಾಷ್ಟ್ರ ನಾಯಕರ ಭಾವಚಿತ್ರಗಳನ್ನು ಪಾದರಕ್ಷೆ ಬಿಡುವ ಸ್ಥಳದಲ್ಲಿ ಇರಿಸಿ ಅವಮಾನ ಮಾಡಲಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಬಿ. ಕೃಷ್ಣಪ್ಪ) ಬಣದ ಹಟ್ಟಿ ಸಂಚಾಲಕರು ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದರು .

ದಿನಾಂಕ 17-09-2026 ರಂದು ಸದರಿ ಭಾವಚಿತ್ರಗಳಿರುವ ಸ್ಥಳದ ಸಮೀಪದಲ್ಲೇ ಸಾರ್ವಜನಿಕರು/ಸಿಬ್ಬಂದಿಯ ಪಾದರಕ್ಷೆಗಳನ್ನು ಬಿಡುವ ಸ್ಥಳವೆಂದು ಸ್ಪಷ್ಟವಾಗಿ ಅಕ್ಷರಗಳಲ್ಲಿ ನಮೂದಿಸಿರುವದು ಕಂಡುಬರುತ್ತದೆ. ಇಂಥಹ ಸ್ಥಳದಲ್ಲಿ ರಾಷ್ಟ್ರ ನಾಯಕರ ಫೋಟೋಗಳನ್ನು ಇಟ್ಟಿದ್ದು, ಡಾ . ಬಾಬಾ ಸಾಹೇಬ ಅಂಬೇಡ್ಕರ ಫೋಟೋ ಈ ಪಾದರಕ್ಷೆಗಳಲ್ಲಿ ಬಿದ್ದಿರುವದು ವಿಡಿಯೋದಲ್ಲಿ ಪರಿಶೀಲಿಸಬಹುದು.



ರಾಷ್ಟ್ರ ನಾಯಕರ ಭಾವಚಿತ್ರಗಳ ಪಕ್ಕದಲ್ಲಿ ಪಾದರಕ್ಷೆಗಳು ಅಲ್ಲಲ್ಲಿ ಬಿದ್ದಿರುವದು ವಿಡಿಯೋದಲ್ಲಿ ಪರಿಶೀಲಿಸಬಹುದು.

ಈ ರೀತಿಯು ರಾಷ್ಟ್ರ ನಾಯಕರ ಭಾವಚಿತ್ರಗಳಿಗೆ ಅಗೌರವ ಉಂಟಾಗುವಂತಹ ಪರಿಸ್ಥಿತಿಯನ್ನು ಈ ಅಧಿಕಾರಿಗಳು ಸೃಷ್ಟಿಸಿರುತ್ತಾರೆ. ರಾಷ್ಟ್ರ ನಾಯಕರ ಭಾವಚಿತ್ರಗಳನ್ನು ಇಟ್ಟು ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಮಾಡಬೇಕಾದ ಈ ಎಪಿಎಂಸಿ, ಅಧಿಕಾರಿಗಳು ರಾಷ್ಟ್ರ ನಾಯಕ-ರಿಗೆ ಮಾಡಿದ ಅವಮಾನವನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥ ಈ ಅಧಿಕಾರಿಗಳ ವಿರುದ್ಧ ಪೋಲಿಸ್ ಪ್ರಕರಣ ದಾಖಲಿಸಿ ಇವರ ಮೇಲೆ ಇಲಾಖೆಯ ನಿಯಮಾನುಸಾರ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು . ಈ ಸಂದರ್ಭದಲ್ಲಿ ಯಲಪ್ಪ ಮಾಚನೂರು , ಪ್ರಶಾಂತ ದೀನಸಮುದ್ರ , ಶ್ರೀಮಂತ , ರಾಮಣ್ಣ , ಲಿಂಗಣ್ಣ , ದೇವಣ್ಣ , ಮ-ರಿಸ್ವಾಮಿ ಸೇರಿದಂತೆ ಇದ್ದರು .

ವಿಜಯರಾಘವೇಂದ್ರ ಅಭಿನಯದ "ರುದ್ರಾಭಿಷೇಕಂ' ಚಿತ್ರದ ಟ್ರೈಲರ್ ಬಿಡುಗಡೆ

❏ ನೈಜ್ಯ ದೆಸೆ ನ್ಯೂಸ್

ಬೆಂಗಳೂರ: ಫ್ಯಾನ್ ಇಂಡಿಯಾ ಕ್ರಿಯೇಷನ್ಸ್ ವಿಜಯಪುರ ಅವರ ಇದೆ ಸೆಪ್ಟಂಬರ್ 25 ರಂದು ರಾಜ್ಯಾದ್ಯಂತ ತೆರೆಗೆ ಬರಲಿರುವ 'ರುದ್ರಾಭಿಷೇಕಂ' ಚಿತ್ರದ ಟ್ರೈಲರ್ ಬಿಡುಗಡೆ ಕಾರ್ಯಕ್ರಮ ಬೆಂಗಳೂರಿನ ಜಿಟಿ ಮಾಲ್‌ನಲ್ಲಿ ನೆರವೇರಿತು.

ನಾಡಿನ ಕಲೆ, ಸಂಸ್ಕೃತಿ-ಕ ಪರಂಪರೆಗಳಲ್ಲಿ ಒಂದಾದ ವೀರಗಾಸೆ ಕಲೆ ಆರಾಧಿಸುವ ಕುಟುಂಬ ಕುರಿತು ಮತ್ತು ವೀರಭದ್ರ ದೇವರ ಇತಿಹಾಸ ಹೇಳುವ 'ರುದ್ರಾಭಿಷೇಕಂ'ದಲ್ಲಿ ವೀರಗಾಸೆಯ ಕುಣಿತ ಗಮನ ಸೆಳೆಯಲಿದೆ. ವೀರಗಾಸೆಯ ವಿಶೇಷ ಲುಕ್ ನಲ್ಲಿ ಕಾಣಿಸಿಕೊಂಡ ವಿಜಯರಾಘವೇಂದ್ರ ಮಾತನಾಡಿ ಇದೊಂದು ದೈವ ಕಲ್ಪನೆಯ ಸಾಮಾಜಿಕ ಚಿತ್ರ ಇಲ್ಲಿ ತಂದೆ ಮತ್ತು ಮಗನ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದೇನೆ.



ವಿಶೇಷ ಪಾತ್ರ ಅನಿಸಿದ್ರಿಂದ ನಾನು ಈ ಸಿನಿಮಾಕ್ಕೆ ಒಪ್ಪಿಕೊಂಡೆ ಎಂದರು. ಸಂಗೀತ ನಿರ್ದೇಶಕ ವಿ ಮನೋಹರ್ ಮಾತನಾಡಿ ನಾನು ಸಂಗೀತ ನೀಡುವುದರೊಂದಿಗೆ ಇದರಲ್ಲಿ ಒಂದು ಪಾತ್ರ ಮಾಡಿರುವೆ. ಈ ಪಾತ್ರದಲ್ಲಿನ ನಾನು ಡಿಫರೆಂಟ್ ಆಗಿ ಕಾಣುತ್ತಿದ್ದೇನೆ. ಮೇಕಪ್ ಆದಮೇಲೆ ನಾನು ಹೀಗೆ ಕಾಣುತ್ತಿದ್ದೇನೆ ಎಂದು ಸಂಶಯ ಬಂದಿದ್ದು ಆತರದ ಲುಕ್ ನಲ್ಲಿ ನನ್ನನ್ನು ಚಿತ್ರಿಸಿದ್ದಾರೆ ಎಂದರು.

ಥ್ರಿಲ್ಲರ್ ಮಂಜು ಮಾತನಾಡಿ ವಿಜಯರಾಘವೇಂದ್ರ ಅವರಿಗಾಗಿಯೇ ಹೊಡೆದಾಟದ ಪಟ್ಟುಗಳನ್ನು ಡಿಫ್ರೆಂಟ್ ಆಗಿ ಮಾಡಿದ್ದೇನೆ ಎಂದರು. ನಿರ್ದೇಶಕ ವಸಂತ್ ಕುಮಾರ್ ಮಾತನಾಡಿ ಚಿತ್ರೀಕರಣ ಸಂದರ್ಭದಲ್ಲಿ ಹಲವು ಅಡೆತಡೆಗಳು ಎದುರಾದರು ಅವುಗಳನ್ನು ಮೆಟ್ಟಿನಿಂತು ಪೂರ್ಣಪ್ರಮಾಣದ ಚಿತ್ರವನ್ನು ತಂದ ಬಗೆಯನ್ನು ಹೇಳಿದರು. ಈಗಾಗಲೇ ಈ ಸಿನಿಮಾದ ಹಾಡುಗಳು ಸೂಪರ್ ಹಿಟ್ ಆಗಿವೆ ಎಂದರು.

ಚಿತ್ರದಲ್ಲಿ ವಿಜಯರಾಘವೇಂದ್ರ, ನಾಯಕಿಯಾಗಿ ಪ್ರಿಯಾಂಕ ತಿಮ್ಮೇಶ, ಬಲರಾಜ್‌ವಾಡಿ, ಶಂಕರ ನಾರಾಯಣ್, ಮೈಸೂರು ಬಸವರಾಜ್, ಬ್ಯಾಂಕ್ ಪ್ರಸಾದ, ಮನು, ಬುಲೆಟ್ ವಿನು, ವಿನಯ್, ಸನತ್, ಸಂದೀಪ್, ಮಹಾಲಿಂಗ್ ಹೂಗಾರ್, ಸೌಂದರ್ಯ, ನವನೀತ, ಮಮತಾ, ಮಂಜುಳಾ, ಧನಲಕ್ಷ್ಮಿ, ಸ್ವಾತಿ, ಮೊದಲಾದವ-ರಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಮುತ್ತುರಾಜ್, ವಿ.ಮನೋಹರ್ ಸಂಗೀತ , ಭಜರಂಗಿ ಮೋಹನ್ ನೃತ್ಯ ಸಂಯೋಜನೆ, ಥ್ರಿಲ್ಲರ್‌ಮಂಜು ಸಾಹಸ, ಬಾಬುಖಾನ್ ಕಲಾ ನಿರ್ದೇಶನ, ನೊಣವಿನಕೆರೆಕುಮಾರ ಪ್ರಸಾಧನ, ಪಶುಪತಿ ವಸ್ತ್ರಾಲಂಕಾರ, ಮುತ್ತುರಾಜ್.ಟಿ ಸಂಕಲನ, ನಾಗೇಂದ್ರ, ಡಾ. ಪ್ರಭು.ಗಂಜಿಹಾಳ, ಡಾ.ವೀರೇಶ್ ಹಂಡಿಗಿ ಪಿ. ಆರ್. ಓ, ಸಹನಿರ್ದೇಶನ ಮನು ಮತ್ತು ಧೀರಜ್, ಚಿತ್ರಕಥೆ-ಸಾಹಿತ್ಯ ನಿರ್ದೇಶನ ಕೆ ವಸಂತ್‌ಕುಮಾರ್ ಅವರದಿದೆ. ಎನ್.ಜಯರಾಮ್, ಕೆ.ಎನ್.ಮಂಜುನಾಥ್, ಕೆ. ವೆಂಕಟೇಶ್, ಬಿ.ಚಿದಾನಂದ ಮೂರ್ತಿ, ಸುರೇಶ ಬಾಬು, ಕೆ.ಎಸ್.ರವಿ, ಬಿ.ಕೆ.ಅಶ್ವತ್ ನಾರಾಯಣ, ಡಾ.ಎಂ.ಶಿವಕುಮಾರ, ಕುಸುಮಾ ವಸಂತಕುಮಾರ ಒಂಬತ್ತು ಜನ ನಿರ್ಮಾಪಕರಿದ್ದಾರೆ.

-ಡಾ.ಪ್ರಭು.ಗಂಜಿಹಾಳ

ನೇಮಕಾತಿ ಪ್ರಕಟಣೆ

ಖಬಅಖಬ ನೇಮಕಾತಿ 2026 ? 28 ಹಾಸ್ಪಿಟಾಲಿಟಿ ಮಾನಿಟರ್‌ಗಳು ಮತ್ತು ಟೂರಿಸಂ ಮಾನಿಟರ್‌ಗಳ ಹುದ್ದೆಗಳಿಗೆ ನೇರ ಸಂದರ್ಶನ (Walk-in Interview) ಸೆಪ್ಟೆಂಬರ್ 18, 2026

IRCTC ನೇಮಕಾತಿ 2026: 28 ಹಾಸ್ಪಿಟಾಲಿಟಿ ಮಾನಿಟ–ರ್‌ಗಳು ಮತ್ತು ಟೂರಿಸಂ ಮಾನಿಟರ್‌ಗಳ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಇಂಡಿಯನ್ ರೈಲ್ವೆ ಕ್ಯಾಟರಿಂಗ್ ಅಂಡ್ ಟೂ–ರಿಸಂ ಕಾರ್ಪೊರೇಷನ್ (IRCTC) ಸೆಪ್ಟೆಂಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಹಾಸ್ಪಿಟಾಲಿಟಿ ಮಾನಿಟರ್‌ಗಳು ಮತ್ತು ಟೂರಿಸಂ ಮಾನಿಟರ್‌ಗಳ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದೆ. ಅಖಿಲ ಭಾರತ ಮಟ್ಟದ ಸರ್ಕಾರಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 09–ಅಕ್ಟೋಬರ್–2026 ರಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು. ಅಧಿಕೃತ ವೆಬ್‌ಸೈಟ್: irctc.com

ಪ್ರಬಂಧ ಸ್ಪರ್ಧೆ: ಜಿಲ್ಲಾ ಮಟ್ಟಕ್ಕೆ ಹುಲಿಗೆವ್ವ ಆಯ್ಕೆ

ನೈಜ್ಯ ದೆಸೆ ನ್ಯೂಸ್

ಕೊಪ್ಪಳ: ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ನಗರದ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯಲ್ಲಿ ಬೆಟಗೇರಿ ಸರ್ಕಾರಿ ಪ್ರೌಢಶಾಲೆಯ 10ನೇ ತರಗತಿ ವಿದ್ಯಾರ್ಥಿನಿ ಕುಮಾರಿ ಹುಲಿಗೆವ್ವ ತುಂಬವ್ವನವರ್ ದ್ವಿತೀಯ ಸ್ಥಾನ ಪಡೆದು ಸಾಧನೆ ಮಾಡಿದ್ದಾಳೆ.



ನನ್ನ ಮತ, ನನ್ನ ಹಕ್ಕು, ನನ್ನ ದೇಶದ ಭವಿಷ್ಯ' ಎಂಬ ವಿಷಯದ ಕು–ರಿತು ನಡೆದ ಸ್ಪರ್ಧೆಯಲ್ಲಿ ಉತ್ತಮ ಪ್ರತಿಭೆ ಪ್ರದರ್ಶಿಸಿದ ಈಕೆ, ಇದೀಗ ಮುಂದಿನ ಹಂತದ ಸ್ಪರ್ಧೆಗೆ ಆಯ್ಕೆಯಾಗಿದ್ದಾಳೆ.

ಕಡು ಬಡತನದ ಹಿನ್ನೆಲೆಯ ಉಳ್ಳ ಈ ವಿದ್ಯಾರ್ಥಿನಿ ಓದಿನಲ್ಲಿ ಸದಾ ಮುಂಚೂಣಿಯಲ್ಲಿದ್ದು, ಶಾಲೆಯ ಎಲ್ಲ ಸಹಪಠ್ಯ ಚಟುವಟಿಕೆಗಳಲ್ಲೂ ಸಕ್ರಿಯವಾಗಿ ಪಾಲ್ಗೊಳ್ಳುತ್ತಿದ್ದಾಳೆ. ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶಾಲೆಗೆ ಟಾಪರ್ ಆಗುವ ಭರವಸೆ ಮೂಡಿಸಿದ್ದಾಳೆ ಎಂದು ಶಿಕ್ಷಕರು ಹೆಮ್ಮೆಯಿಂದ ತಿಳಿಸಿದ್?

ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಿ: ಅಕ್ಕಮ್ಮ ಅಕ್ಕನವರು

ನೈಜ್ಯ ದೆಸೆ ನ್ಯೂಸ್

ಮಾನ್ವಿ : ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಯಾಗಬೇಕಾದರೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಕಲ್ಯಾಣ ಕರ್ನಾಟಕ ಉತ್ಸವವನ್ನು ಪ್ರತಿಯೊಬ್ಬರೂ ವಿಜೃಂಭಣೆಯಿಂದ ಆಚರಿಸಬೇಕು ಎಂದು ವಿಶ್ವ ಚೇತನ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವ ಹಾಗೂ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಗಣ್ಯರು ಕರೆ ನೀಡಿದರು.



ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಓಂ ಮಂಡಳಿ ಶಿವಶಕ್ತಿ ಸೇವಾ ಸಂಸ್ಥಾನದ ಮಾನ್ವಿ ಶಾಖೆಯ ಸಂಚಾಲಕರಾದ ಅಕ್ಕಮ್ಮ ಅಕ್ಕನವರು ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿ, ಪ್ರತಿಯೊಬ್ಬರೂ ದೇಶಪ್ರೇಮವನ್ನು ಬೆಳೆಸಿಕೊಳ್ಳಬೇಕು. ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರವನ್ನು ಬೆಳೆಸಿಕೊಂಡು ಸಮಾಜ–ಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ತಿಳಿಸಿದರು. ಶಿಕ್ಷಕಿ ಶಾರದಾ ವಿಶ್ವಕರ್ಮ ಮಾತನಾಡಿ, ವಿಶ್ವಕರ್ಮರು ವಿಶ್ವಕರ್ಮ ಸಮಾಜದ ಗುರುಗಳಾಗಿದ್ದು, ದೇವಶಿಲ್ಪಿಗಳಾಗಿ ಅವರು ಮಾಡಿದ ಮಹತ್ವದ ಕಾರ್ಯಗಳನ್ನು ಸ್ಮರಿಸಿದರು. ಶಿಕ್ಷಕಿ ಅಂಬುಜಾ ಅವರು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸರ್ಕಾರದಿಂದ ದೊರೆತಿರುವ ವಿವಿಧ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಈ ಸೌಲಭ್ಯಗಳನ್ನು ಅರ್ಹರು ಸಮರ್ಪಕವಾಗಿ ಬಳಸಿಕೊಂಡು ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಹೇಳಿದರು.

ತಾಲೂಕು ಖಾಸಗಿ ಶಾಲಾ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ಉತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾದ ಶ್ರೀಮತಿ ಸುವರ್ಣ ಅವರನ್ನು ಸಂಸ್ಥೆಯ ಪರವಾಗಿ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ಶಿಕ್ಷಕಿ ಸುವರ್ಣ ಪ್ರಾಥ–ರ್ನೆ ನೆರವೇರಿಸಿದರು. ಶಿಕ್ಷಕಿ ಆಯಿಷಾ ಸ್ವಾಗತಿಸಿದರು. ವೇದಿಕೆಯಲ್ಲಿ ಕಾರ್ಯದರ್ಶಿ ಗೀತಾ ಹಿರೇಮಠ ಹಾಗೂ ಸಂಸ್ಥಾಪಕ ಅಧ್ಯಕ್ಷ ಎಂ.ಎಂ. ಹಿರೇಮಠ ಉಪಸ್ಥಿತರಿದ್ದರು. ನಂತರ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಶಿಕ್ಷಕಿ ಬೂಷಿರಾ ವಂದಿಸಿದರು.

ಗಾಯದ ಮೇಲೆ ಬರೆ ಎಳೆದ ಜೆಸ್ಕಾಂ: ಹೆಚ್ಚುವರಿ ವಿದ್ಯುತ್ ಪೂರೈಕೆಗೆ ಕಂಪ್ಲಿ ರೈತರ ಒತ್ತಾಯ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಮಳೆ ಕೊರತೆಗೆ ಈಗಾಗಲೇ ರೈತರು ಬದುಕು ಅತಂತ್ರದಲ್ಲಿ ಸಾಗುವಂತಾಗಿದ್ದು, ಈಗ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದ್ದು, ಕೂಡಲೇ ರೈತರ ಪಂಪ್‌ಸೆಟ್‌ಗಳಿಗೆ 6 ತಾಸಿನ ವಿದ್ಯುತ್ ಪೂರೈಕೆ ಜೊತೆಗೆ ಹೆಚ್ಚವರಿ ಮೂರು ತಾಸು ತ್ರಿಫೇಸ್ ವಿದ್ಯುತ್ ಸರಬರಾಜು ಮಾಡಬೇಕೆಂದು ಆಗ್ರಹಿಸಿ,

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಕಂಪ್ಲಿ ತಾಲೂಕು ಘಟಕದ ನೇತೃತ್ವದಲ್ಲಿ ರೈತರು ಪಟ್ಟಣದ ಜೆಸ್ಕಾಂ ಕಛೇರಿ ಆವರಣದಲ್ಲಿ ಗುಲ್ಬರ್ಗಾ ವಿದ್ಯುತ್ ಸರಬರಾಜಿನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ–ರಿಗೆ ಬರೆದ ಮನವಿ ಪತ್ರವನ್ನು ಎಇಇ ಶ್ರೀನಿವಾಸ ಪ್ರಸಾದ್‌ಗೆ ಶುಕ್ರವಾರ ಸಲ್ಲಿಸಿದರು. ನಂತರ ರಾಜ್ಯ ಕಾರ್ಯಾಧ್ಯಕ್ಷ ಬಿ.ವಿ.ಗೌಡ ಮತ್ತು ಕಂಪ್ಲಿ ತಾಲೂಕು ಕಾರ್ಯಾಧ್ಯಕ್ಷ ಕೊಟ್ಟೂರು ರಮೇಶ್ ಮಾತನಾಡಿ,



ಕಂಪ್ಲಿ ತಾಲೂಕು ಭಾಗದಲ್ಲಿ ಪ್ರಸ್ತುತ ಜೆಸ್ಕಾಂವತಿಯಿಂದ ಕೃಷಿ ಪಂಪ್‌ಸೆಟ್‌ಗಳಿಗೆ ದಿನಕ್ಕೆ 7 ಗಂಟೆಗಳ ಕಾಲ ವಿದ್ಯುತ್ ಸರಬರಾಜು ಮಾಡಲಾಗುತ್ತಿತ್ತು. ಆದರೆ, ಕಳೆದ 2–3 ದಿನಗಳಿಂದ ಒಂದು ತಾಸು ಕಡಿತಗೊಳಿಸಿ, ಬರೀ 6 ಗಂಟೆಗಳ ವಿದ್ಯುತ್ ಸರಬರಾಜು ಮಾಡುತ್ತಿರುವುದು ಖಂಡನೀಯವಾಗಿದೆ.

ಪ್ರಸಕ್ತ ಸಾಲಿನಲ್ಲಿ ತಾಲೂಕಿನಲ್ಲಿ ತೀವ್ರ ಮಳೆಯ ಅಭಾವ ಉಂಟಾಗಿದ್ದು, ಪರಿಸ್ಥಿತಿ ಅತ್ಯಂತ ಭೀಕರವಾಗಿದೆ. ಅಂತರ್ಜಲ ಮಟ್ಟ ತೀವ್ರವಾಗಿ ಕುಸಿದಿದ್ದು, ಬೋರ್‌ವೆಲ್‌ಗಳಲ್ಲಿ ನೀರಿನ ಇಳುವರಿ ಗಣನೀಯವಾಗಿ ಕಡಿಮೆಯಾಗಿದೆ. ಇಂತಹ ಸಂಕಷ್ಟ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ತಾವುಗಳು ಅನ್ಯಾಯವಾಗದಂತೆ ನೋಡಿಕೊಳ್ಳಬೇಕು. ರೈತರು ಸಾಲ ಸೂಲ ಮಾಡಿ, ಭತ್ತ, ಮೆಣಸಿನಕಾಯಿ ಮತ್ತು ಬಾಳೆ ಮುಂತಾದ ಪ್ರಮುಖ ವಾಣಿಜ್ಯ ಹಾಗೂ ಆಹಾರ ಬೆಳೆಗಳು ನೀರಿನ ಕೊರತೆಯಿಂದಾಗಿ ಕಣ್ಣೆದುರೇ ಒಣಗುತ್ತಿವೆ. ಪ್ರಸ್ತುತ ಬೆಳೆಗಳಿಗೆ ನೀರು ಒದಗಿಸಲು ಪಂಪ್‌ಸೆಟ್ ಮೂಲಕ ವಿದ್ಯುತ್ ಸರಬರಾಜು ಅಗತ್ಯವಾಗಿದೆ.

ಆದ್ದರಿಂದ ಕೂಡಲೇ ಜೆಸ್ಕಾಂ ಅಧಿಕಾರಿಗಳು 6 ತಾಸಿನ ಜೊತೆಗೆ ಹೆಚ್ಚುವರಿ 3 ತಾಸು ವಿದ್ಯುತ್ ಪೂರೈಯಿಸಬೇಕು. ವಿದ್ಯುತ್ ಪೂರೈಸದಿದ್ದಲ್ಲಿ ರೈತರ ಬೆಳಗೆ ಎಕರೆಗೆ 50 ಸಾವಿರ ನಷ್ಟ ಪರಿಹಾರ ನೀಡಬೇಕು. ತ್ವರಿತಗತಿಯಲ್ಲಿ ಮೇಲಿನ ಅಧಿಕಾರಿಗಳೊಂದಿಗೆ ಚರ್ಚಿಸಿ, ವಿದ್ಯುತ್ ಪೂರೈಯಿಸಬೇಕು. ಇಲ್ಲದ್ದಿದ್ದಲ್ಲಿ ಸೆ.21ರಂದು ಬಳ್ಳಾರಿಯ ಮುಖ್ಯ ಅಭಿಯಂತರರ ಕಛೇರಿ ಜೆಸ್ಕಾಂ ಕಛೇರಿಗೆ ರೈತರೊಂದಿಗೆ ಮುತ್ತಿಗೆ ಹಾಕಲಾಗುವುದು ಎಂದರು. ಜೆಇ ಮಹಾಂತೇಶ, ರೈತ ಮುಖಂಡರಾದ ವೆಂಕಟರಾಮರಾಜು, ಇಟಗಿ ಶರಣೇಗೌಡ, ಆನಂದರೆಡ್ಡಿ ಸುದರ್ಶನ, ನಾಗರಾಜ, ಮಲ್ಲಯ್ಯ, ರಮೇಶ, ನಾಗಪ್ಪ, ಈರಣ್ಣ, ರವಿಚಂದ್ರ ಸೇರಿದಂತೆ ರೈತರಿದ್ದರು.

ಸ್ವಚ್ಛತಾ ಜಾಗೃತಿಗೆ ಬಾಲಕಿಯರ ಹೆಜ್ಜೆ

ನೈಜ್ಯ ದೆಸೆ ನ್ಯೂಸ್

ಸಿರುಗುಪ್ಪ: ಸ್ವಚ್ಛತೆಯ ಮಹತ್ವವನ್ನು ಸಾರುವ ಹಾಗೂ ಸಾರ್ವಜನಿಕರಲ್ಲಿ ಸ್ವಚ್ಛತಾ ಅರಿವು ಮೂಡಿಸುವ ಉದ್ದೇಶದಿಂದ ತೆಕ್ಕಲಕೋಟೆ ಪಟ್ಟಣ ಪಂಚಾಯಿತಿ ವತಿಯಿಂದ 'ಸ್ವಚ್ಛತಾ ಹೀ ಸೇವಾ 2026' ಅಭಿಯಾನದಡಿ ಸ್ವಚ್ಛತಾ ಜಾಥಾ ಹಮ್ಮಿಕೊಳ್ಳಲಾಯಿತು.

ತಾಲೂಕಿನ ತೆಕ್ಕಲಕೋಟೆ ಪಟ್ಟಣದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದ ಜಾಥಾ ಬಸ್ ನಿಲ್ದಾಣ, ಮುಖ್ಯ ಬೀದಿ ಸೇರಿದಂತೆ ಪಟ್ಟಣದ ವಿವಿಧ ಪ್ರಮುಖ ಪ್ರದೇಶಗಳಲ್ಲಿ ನಡೆಯಿತು. ಸ್ವಚ್ಛತೆ ಕಾಪಾಡುವಂತೆ ಸಾರ್ವಜನಿಕ–ರಿಗೆ ಜಾಗೃತಿ ಮೂಡಿಸುವ ಮೂಲಕ ವಿದ್ಯಾರ್ಥಿನಿಯರು ಅಭಿಯಾನಕ್ಕೆ ಕಳೆ ತಂದರು.

ಸ್ವಚ್ಛತೆ ನಮ್ಮೆಲ್ಲರ ಹೊಣೆ : ಪಟ್ಟಣದ ಸ್ವಚ್ಛತೆ ಕಾಪಾಡುವುದು ಕೇವಲ ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಲ್ಲ. ಪ್ರತಿಯೊಬ್ಬ ನಾಗರಿಕರೂ ಸ್ವಚ್ಛತಾ ಕಾರ್ಯದಲ್ಲಿ ಕೈಜೋಡಿಸಬೇಕು. ಕಸವನ್ನು ಎಲ್ಲೆಂದರಲ್ಲಿ ಎಸೆಯದೆ, ನಿಗದಿತ ಸ್ಥಳದಲ್ಲಿ ಹಾಕುವ ಮೂಲಕ ಸ್ವಚ್ಛ ಹಾಗೂ ಆರೋಗ್ಯಕರ ಪರಿಸರ ನಿರ್ಮಾಣಕ್ಕೆ ಸಹಕರಿಸಬೇಕು ಎಂಬ ಸಂದೇಶವನ್ನು ಜಾಥಾದಲ್ಲಿ ಸಾರಲಾಯಿತು.

ಶಾಲಾ ಮಕ್ಕಳ ಭಾಗವಹಿಸುವಿಕೆಯಿಂದ ಸ್ವಚ್ಛತಾ ಅಭಿಯಾನಕ್ಕೆ ಸಾರ್ವಜನಿಕರ ಗಮನ ಸೆಳೆಯಲಾಯಿತು. ವಿದ್ಯಾರ್ಥಿಗಳಲ್ಲಿ ಪರಿಸರ ಕಾಳಜಿ ಹಾಗೂ ಸ್ವಚ್ಛತಾ ಜವಾಬ್ದಾರಿಯ ಅರಿವು ಮೂಡಿಸುವ ನಿಟ್ಟಿನಲ್ಲಿಯೂ ಕಾರ್ಯಕ್ರಮ ಮಹತ್ವ ಪಡೆದಿತು.

ಜಾಥಾದಲ್ಲಿ ಶಾಲಾ ಶಿಕ್ಷಕರು



ಹಾಗೂ ವಿದ್ಯಾರ್ಥಿನಿಯರು ಹಾಗೂ ಪಟ್ಟಣ ಪಂಚಾಯಿತಿ ಆರೋಗ್ಯ ನಿರೀಕ್ಷಣಾಧಿಕಾರಿ ಅನ್ನಪೂರ್ಣ, ಕಮ್ಯುನಿಟಿ ಮೊಬೈಲೈಸರ್‌ಗಳಾದ ರೇಷ್ಮ, ಹುಲಿಗೆಮ್ಮ, ಹಸನ್ ಸಾಬ್ ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

ವರದಿ : ಮಸೀದಿ ,ಅಬ್ದುಲ್ ಗೌಸ್ ,ಸಿರುಗುಪ್ಪ

ಸಾರಿಗೆ ಸೇವೆಗೆ ಡಿಜಿಟಲ್ ಸ್ಪರ್ಶ :

ಕೌಂಟರ್‌ನಿಂದ ಮೊಬೈಲ್ ತಲುಪಿದ ಟಿಕೆಟ್ ಸೇವೆ

ನೈಜ್ಯ ದೆಸೆ ನ್ಯೂಸ್

ಟಿಕೆಟ್ ಕಾಯ್ದಿರಿಸುವುದರಿಂದ ರದ್ದತಿಯವರೆಗೆ ಹಲವು ಸೇವೆಗಳು ಈಗ ಒಂದೇ ವೇದಿಕೆಯಲ್ಲಿ ಲಭ್ಯವಾಗಲಿದೆ. ಅದರಲ್ಲೂ ವಾಟ್ಸಾಪ್‌ನಲ್ಲೇ ಬಸ್ ಟಿಕೆಟ್ ಕಾಯ್ದಿರಿಸುವ ಸೌಲಭ್ಯದಿಂದ ಕೆಎಸ್‌ಆರ್‌ಟಿಸಿ ಸೇವೆ ಪ್ರಯಾಣಿಕರ ಕೈಬೆರಳ ತುದಿಗೆ ಬಂದಿದೆ.

ಸಾರಿಗೆ ಸೇವೆ ಪಡೆಯಲು ಇನ್ನು ಮುಂದೆ ಕೌಂಟರ್‌ಗೆ ತೆರಳಿ ಸರತಿ ಸಾಲಿನಲ್ಲಿ ನಿಲ್ಲಬೇಕಾದ ಅನಿವಾರ್ಯತೆ ಕ್ರಮೇಣ ಕಡಿಮೆಯಾಗುತ್ತಿದೆ. ಮೊಬೈಲ್‌ನಲ್ಲೇ ಟಿಕೆಟ್ ಬುಕ್ ಮಾಡುವುದು, ಪಾವತಿ ಮಾಡುವುದು, ಇ–ಟಿಕೆಟ್ ಪಡೆಯುವುದು, ಅಗತ್ಯವಿದ್ದರೆ ಟಿಕೆಟ್ ರದ್ದುಪಡಿಸುವುದು ಇವೆಲ್ಲವೂ ಡಿಜಿಟಲ್ ಮೂಲಕವೇ ಸಾಧ್ಯವಾಗುತ್ತಿದೆ. ಸಾರಿಗೆ ಸೇವೆ ಜನರ ಬಳಿಗೆ ಹೋಗುವುದಲ್ಲ. ಈಗ ಸಾರಿಗೆ ಸೇವೆಯೇ ಜನರ ಮೊಬೈಲ್‌ಗೆ ಬರುತ್ತಿದೆ ಎಂಬ ಹೊಸ ಪರಿಕಲ್ಪನೆಯೊಂದಿಗೆ ಕರ್ನಾಟಕವು ಸಾರ್ವಜನಿಕ ಸಾರಿಗೆಯನ್ನು ಮತ್ತಷ್ಟು ಸರಳ ಮತ್ತು ಪ್ರಯಾಣಿಕ ಸ್ನೇಹಿಯಾಗಿಸುವತ್ತ ಹೆಜ್ಜೆ ಇಡುತ್ತಿದೆ.

ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ವಾಟ್ಸಾಪ್ ಆಧಾರಿತ ಮುಂಗಡ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯನ್ನು ಪರಿಚಯಿಸುತ್ತಿದೆ. ಜನರು ಪ್ರತಿದಿನ ಬಳಸುವ ವಾಟ್?ಸಆ?ಯಪ್ ವೇದಿಕೆಯಲ್ಲೇ ಬಸ್ ಟಿಕೆಟ್ ಕಾಯ್ದಿರಿಸುವ ಅವಕಾಶ ದೊರೆಯುವುದರಿಂದ, ಸಾರ್ವಜನಿಕ ಸಾರಿಗೆ ಸೇವೆ ಮತ್ತಷ್ಟು ಸುಲಭವಾಗಿ ಜನರ ಕೈಗೆ ತಲುಪಲಿದೆ.



ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆ–ಎಸ್‌ಆರ್‌ಟಿಸಿ) ವಾಟ್ಸಾಪ್ ಆಧಾರಿತ ಮುಂಗಡ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯನ್ನು ಪರಿಚಯಿಸುತ್ತಿದೆ. ಜನರು ಪ್ರತಿದಿನ ಬಳಸುವ ವಾಟ್ಸಾಪ್ ವೇದಿಕೆಯಲ್ಲೇ ಬಸ್ ಟಿಕೆಟ್ ಕಾಯ್ದಿರಿಸುವ ಅವಕಾಶ ದೊರೆಯುವುದರಿಂದ, ಸಾರ್ವಜನಿಕ ಸಾರಿಗೆ ಸೇವೆ ಮತ್ತಷ್ಟು ಸುಲಭವಾಗಿ ಜನರ ಕೈಗೆ ತಲುಪಲಿದೆ.

ರಾಜ್ಯದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸಮಗ್ರಗೊಳಿಸುವ ಉದ್ದೇಶದಿಂದ ಒಂದು ಕರ್ನಾಟಕ ಮೊಬಿಲಿಟಿ ಆಪ್ ಅಭಿವೃದ್ಧಿಪಡಿಸಲಾಗಿದೆ. ಈ ವೇದಿಕೆಯಲ್ಲಿ ರಾಜ್ಯದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ), ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಎನ್‌ಡಬ್ಲ್ಯೂಕೆಆರ್‌ಟಿಸಿ), ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಈ ನಾಲ್ಕು ಪ್ರಮುಖ ಸಾರಿಗೆ ಸಂಸ್ಥೆಗಳನ್ನು ಒಗ್ಗೂಡಿಸುವ ವ್ಯವಸ್ಥೆ ರೂಪಿಸಲಾಗಿದೆ. 30 ದಿನಗಳ ಮುಂಚಿತವಾಗಿ ಟಿಕೆಟ್ ಕಾಯ್ದಿರಿಸಿ ಪ್ರಯಾಣಿಕರು ತಮ ಪ್ರಯಾಣವನ್ನು ಮುಂಚಿತವಾಗಿಯೇ ಯೋಜಿಸಿಕೊಳ್ಳಲು 30 ದಿನಗಳ ಮುಂಚಿತವಾಗಿ ಟಿಕೆಟ್ ಕಾಯ್ದಿರಿಸುವ ಅವಕಾಶವಿದೆ. ದೂರದ ಪ್ರಯಾಣ, ಕುಟುಂಬದೊಂದಿಗೆ ಪ್ರವಾಸ, ಹಬ್ಬ–ಹರಿದಿನಗಳ ಪ್ರಯಾಣ ಅಥವಾ ಮುಂಚಿತ ಯೋಜನೆ ಅಗತ್ಯವಿರುವ ಸಂದರ್ಭಗಳಲ್ಲಿ ಈ ಸೌಲಭ್ಯ ಹೆಚ್ಚು ಅನುಕೂಲಕರವಾಗಲಿದೆ. ಟಿಕೆಟ್ ಬುಕ್ಕಿಂಗ್ ಸಂದರ್ಭದಲ್ಲಿ ಯುಪಿಐ ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಹಾಗೂ ವಾಲೆಟ್ ಸೇ–ರಿದಂತೆ ವಿವಿಧ ಡಿಜಿಟಲ್ ಪಾವತಿ ವಿಧಾನಗಳನ್ನು ಬಳಸಬಹುದು. ಪಾವತಿ ಯಶಸ್ವಿಯಾದ ನಂತರ ಬುಕ್ಕಿಂಗ್ ದೃಢೀಕರಣ ಮತ್ತು ಇ–ಟಿಕೆಟ್ ಅನ್ನು ವಾಟ್?ಸಆ?ಯಪ್ ಹಾಗೂ ಇ–ಮೇಲ್ ಮೂಲಕ ಪ್ರಯಾಣಿಕರಿಗೆ ಕಳುಹಿಸಲಾಗುತ್ತದೆ. ಟಿಕೆಟ್ ಬುಕ್ ಮಾಡಿದ ನಂತರ ಪ್ರಯಾಣ ರದ್ದುಪಡಿಸುವ ಪರಿಸ್ಥಿತಿ ಬಂದರೂ ಕೌಂಟರ್‌ಗೆ ತೆರಳಬೇಕಾಗಿಲ್ಲ. ವಾಟ್ಸಾಪ್ ಮೂಲಕ ಬುಕ್ ಮಾಡಿರುವ ಟಿಕೆಟ್‌ನ್ನು ಅದೇ ಸಂಖ್ಯೆಯ ಮೂಲಕ ರದ್ದುಪಡಿಸಬಹುದು.

ಇದಕ್ಕಾಗಿ ವಾಟ್ಸಾಪ್ ಟಿಕೆಟ್ ಕ್ಯಾನ್ಸಲೇಷನ್ ಆಯ್ಕೆಯನ್ನು ಆರಿಸಿ, ಪಿಎನ್‌ಆರ್ ಸಂಖ್ಯೆ, ಮೊಬೈಲ್ ಸಂಖ್ಯೆ ಮತ್ತು ಬುಕ್ಕಿಂಗ್ ಸಂದರ್ಭದಲ್ಲಿ ಪಡೆದ ಟ್ರಾನ್ಸಕ್ಷನ್ ಪಾಸವರ್ಡ್ ಅನ್ನು ನಮೂದಿಸಿ ರದ್ದತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬಹುದು. ಒಂದು ಕರ್ನಾಟಕ ಮೊಬಿಲಿಟಿ ಆಪ್‌ನ ಮತ್ತೊಂದು ಪ್ರಮುಖ ಸೌಲಭ್ಯವೆಂದರೆ ದೂರು ನಿರ್ವಹಣೆ. ಕೆಎಸ್‌ಆರ್‌ಟಿಸಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗಳಿಗೆ ಸಂಬಂಧಿಸಿದ ದೂರುಗಳನ್ನು ಒಂದೇ ವೇದಿಕೆಯಲ್ಲಿ ದಾಖಲಿಸಬಹುದು. ಸಾರ್ವಜನಿಕ ಸಾರಿಗೆಯ ಡಿಜಿಟಲೀಕರಣವು ಟಿಕೆಟ್ ಬುಕ್ಕಿಂಗ್‌ನಲ್ಲೇ ನಿಲ್ಲುವುದಿಲ್ಲ. ಮುಂದಿನ ಹಂತದಲ್ಲಿ ಡಿಜಿಟಲ್ ಮಾಸಿಕ ಬಸ್ ಪಾಸ್ ವ್ಯವಸ್ಥೆಯನ್ನು ಜಾ–ರಿಗೆ ತರಲು ಉದ್ದೇಶಿಸಲಾಗಿದೆ. ಆನ್‌ಲೈನ್‌ನಲ್ಲಿಯೇ ಬಸ್ ಪಾಸ್ ಬುಕ್ಕಿಂಗ್, ವಿತರಣೆ ಮತ್ತು ನಿರ್ವಹಣೆ ಮಾಡುವ ವ್ಯವಸ್ಥೆ ರೂಪುಗೊಳ್ಳಲಿದ್ದು, ಕಿಖ ಕೋಡ್ ಆಧಾರಿತ ಡಿಜಿಟಲ್ ಪರಿಶೀಲನೆಗೂ ಅವಕಾಶ ಕಲ್ಪಿಸುವ ಉದ್ದೇಶವಿದೆ. –ಭಾಗ್ಯ ಎಂ. ಮುಖ್ಯ ವರದಿಗಾರರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವಾಟ್ಸಾಪ್ ಟಿಕೆಟ್ ಬುಕ್ಕಿಂಗ್ ಪ್ರಯಾಣಿಕರು ಮುಂಗಡವಾಗಿ ಬಸ್ ಟಿಕೆಟ್ ಕಾಯ್ದಿ–ರಿಸಲು ಕೆಎಸ್‌ಆರ್‌ಟಿಸಿಯ ಅವಾತರ್– ಅಡ್ವಾನ್ಸಡ್ ವೆಬ್ , ಆಂಡ್ರೈಡ್ ಟಿಕೆಟಿಂಗ್ ಅಂಡ್ ರಿಸರ್ವೆಷನ್ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯನ್ನು ಬಳಸಬಹುದಾಗಿದೆ. ಈಗಾಗಲೇ ಆನ್‌ಲೈನ್, ಮೊಬೈಲ್ ಹಾಗೂ ಮುಂಗಡ ಟಿಕೆಟ್ ಕಾಯ್ದಿರಿಸುವ ಕೌಂಟರ್‌ಗಳ ಮೂಲಕ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆ ಲಭ್ಯವಿದೆ. ಇದರ ಮುಂದುವರಿದ ಭಾಗವಾಗಿ ವಾಟ್ಸಾಪ್ ಮೂಲಕವೂ ಟಿಕೆಟ್ ಕಾಯ್ದಿರಿಸುವ ಸೌಲಭ್ಯ ಒದಗಿಸಲಾಗುತ್ತಿದೆ.

ಹೊಸ ಡಿಜಿಟಲ್ ಪಯಣ ಸಾರ್ವಜನಿಕ ಸಾರಿಗೆಯ ಯಶಸ್ಸು ಕೇವಲ ಬಸ್‌ಗಳ ಸಂಖ್ಯೆ ಅಥವಾ ಮಾರ್ಗಗಳ ವಿಸ್ತರಣೆಯಿಂದ ಮಾತ್ರ ನಿರ್ಧಾರವಾಗುವುದಿಲ್ಲ. ಪ್ರಯಾಣಿಕರಿಗೆ ಸೇವೆ ಎಷ್ಟು ಸುಲಭ, ವೇಗ, ವಿಶ್ವಾಸಾರ್ಹ ಮತ್ತು ಪಾರದರ್ಶಕವಾಗಿ ದೊರೆಯುತ್ತದೆ ಎಂಬುದೂ ಅಷ್ಟೇ ಮುಖ್ಯ.

ಹಿಂದುಳಿದ ವರ್ಗಗಳ ಸಭೆ ನಡೆಸಿ ಹಿಂದುಳಿದ ವರ್ಗಗಳು ಸಬಲರಾಗಲು ರಾಜಕೀಯ ಶಕ್ತಿ, ಒಗ್ಗಟ್ಟು ಬಹಳ ಮುಖ್ಯ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯ

ನೈಜ್ಯ ದೆಸೆ ನ್ಯೂಸ್

ತಾಂಡವಪುರ ಸೆಪ್ಟೆಂಬರ್ 18 ಮಂಗಳೂ–ರಿನ ತುಳು ಭವನದಲ್ಲಿ ಏರ್ಪಡಿಸಿದ ಹಿಂದುಳಿದ ವರ್ಗಗಳ ಸಭೆಯಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ರಾಜ್ಯ ನಗರ ವೃದ್ಧಿ ಸಚಿವರು ಆದ ಡಾಕ್ಟರ್ ಎಸ್ ಯತೀಂದ್ರ ಸಿದ್ರಾಮಯ್ಯನವರು ಭಾಗವಹಿಸಿ ಮಾತನಾಡಿ ಹಿಂದುಳಿದ

ವರ್ಗಗಳು ರಾಜಕೀಯವಾಗಿ ಶಕ್ತಿ ಬರಬೇಕಾದರೆ ಒಗ್ಗಟ್ಟು ಬಹಳ ಮುಖ್ಯ ಎಂದು ಸಚಿವರು ಅಭಿಪ್ರಾಯಪಟ್ಟರು ಸ್ವಾತಂತ್ರ್ಯೋತ್ತರ ಭಾರತದಲ್ಲಿ ಅಧಿಕಾರ, ಭೂಮಿ ಮತ್ತು ಆರ್ಥಿಕ ಸಂಪನ್ಮೂಲಗಳು ಕೆಲವೇ ಬಲಶಾಲಿ ವರ್ಗಗಳ ಕೈಯಲ್ಲೇ ಕೇಂದ್ರೀಕೃತವಾಗಿದ್ದವು. ಈ ಹಿನ್ನೆಲೆಯಲ್ಲಿ ಅಹಿಂದ ಸಂಘಟನೆಯ ಮುಖ್ಯ ಉದ್ದೇಶವೇ ಅಧಿಕಾರವನ್ನು ಕೆಳಹಂತದ ಶೋಷಿತ ವರ್ಗಗಳಿಗೆ ತಲುಪಿಸುವುದು ಮತ್ತು ಶಾಸನಸಭೆಗಳಲ್ಲಿ



ಅವರಿಗೆ ಅರ್ಹ ರಾಜಕೀಯ ಪ್ರಾತಿನಿಧ್ಯವನ್ನು ಒದಗಿಸುವುದಾಗಿದೆ ಎಂದು ತಿಳಿಸಿದರು

ಡಾ. ಬಿ.ಆರ್. ಅಂಬೇಡ್ಕರ್ ಅವರ "ಶಿಕ್ಷಣ, ಸಂಘಟನೆ, ಹೋರಾಟ" ಎನ್ನುವ ಸಾರ್ವಕಾಲಿಕ ಸಂದೇಶದಂತೆ, ಈ ವರ್ಗಗಳು ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಸಬಲರಾಗಲು ಮತ್ತು ಸರ್ಕಾರಿ ಯೋಜನೆಗಳ ಸೌಲಭ್ಯಗಳನ್ನು ಕಟ್ಟಕಡೆಯ ವ್ಯಕ್ತಿಯವರೆಗೂ ತಲುಪಿಸಲು ಜಾಗೃತ ಸಂಘಟನೆ ಅತ್ಯಂತ ಅಗತ್ಯವಾಗಿದೆ ಎಂದು ಮನದಟ್ಟು ಮಾಡಿದ ಸಚಿವರು ಅಹಿಂದ ಚಳುವಳಿಯ ನಿಜವಾದ ಶಕ್ತಿ ಅಡಗಿರುವುದು ಸಣ್ಣ ಮತ್ತು ಅತಿಸಣ್ಣ ಸಮುದಾಯಗಳನ್ನು ಒಂದೇ ವೇದಿಕೆಯಡಿಯಲ್ಲಿ ಒಗ್ಗೂಡಿಸುವುದರಲ್ಲಿ. ಪ್ರತಿಯೊಂದು ಸಣ್ಣ ಸಮುದಾಯವೂ ತನ್ನದೇ ಆದ ವಿಶಿಷ್ಟ ಸವಾಲುಗಳನ್ನು ಎದುರಿಸುತ್ತಿದ್ದು, ಅವುಗಳನ್ನು ಪ್ರತ್ಯೇಕವಾಗಿ ಬಗೆಹರಿಸುವುದಕ್ಕಿಂತ ಬೃಹತ್ ಸಾಮಾಜಿಕ ಒಕ್ಕೂಟವಾಗಿ ಶಕ್ತಿ ಪ್ರದರ್ಶಿಸಿದಾಗ ಮಾತ್ರ ಸೂಕ್ತ ಹಕ್ಕುಗಳನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು

ಜೊತೆಗೆ, ಭಾರತದ ಸಂವಿಧಾನ ನೀಡಿದ ಸಮಾನತೆ, ಸ್ವಾತಂತ್ರ್ಯ ಹಾಗೂ ಸಾಮಾಜಿ–ಕ ನ್ಯಾಯದ ತತ್ವಗಳನ್ನು ರಕ್ಷಿಸುವುದು ಮತ್ತು ಮೀಸಲಾತಿಯಂತಹ ಸಂವಿಧಾನಾತ್ಮಕ ಹಕ್ಕುಗಳ ಮೇಲೆ ನಡೆಯುವ ದಾಳಿಗಳ ವಿರುದ್ಧ ಗಟ್ಟಿ ಧ್ವನಿ ಎತ್ತುವುದು ಈ ಸಂಘಟನೆಯ ಪ್ರಮುಖ ಹೊಣೆಗಾರಿಕೆಯಾಗಿದೆ. ಪ್ರತಿಯೊಂದು ಸಣ್ಣ–ಪುಟ್ಟ ಸಮಾಜವೂ ತನ್ನ ಭಿನ್ನಾಭಿಪ್ರಾಯಗಳನ್ನು ಮರೆತು ಪರಸ್ಪರ ಕೈಜೋಡಿಸಿದಾಗ ಮಾತ್ರ ಈ ದೇಶದಲ್ಲಿ ನಿಜವಾದ ಆರ್ಥಿಕ ಸಮಾನತೆ ಮತ್ತು ಸಾಮಾಜಿಕ ಬದಲಾವಣೆ ಸಾಧಿಸಲು ಸಾಧ್ಯ ಎಂದು ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯನವರು ಹೇಳಿದರು ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಐವನ್ ಡಿಸೋಜಾ, ಮಾಜಿ ಮೇಯರ್ ಎಂ. ಶಶಿಧರ್ ಹೆಗಡೆ, ಕರಾವಳಿ ಕುರುಬ ಸಂಘದ ಅಧ್ಯಕ್ಷರಾದ ನಿರಂಜನ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ರಕ್ಷಿತ್ ಶಿವರಾಮ್, ರಾಜ್ಯ ಕುರುಬ ಸಂಘದ ನಿರ್ದೇಶಕರಾದ ಶಿವಾನಂದ್, ಮೊಗವೀರ ಸಮುದಾಯದ ಮುಖಂಡರಾದ ಜಿ. ಶಂಕರ್, ಕುಲಾಲ ಸಮುದಾಯದ ಮುಖಂಡರಾದ ಸುರೇಶ್ ಕುಲಾಲ್, ವಿಶ್ವಕರ್ಮ ಸಮುದಾಯದ ಮುಖಂಡರಾದ ಉದಯ ಆಚಾರ್ ಸೇರಿದಂತೆ ಹಲವು ಸಮಾಜಗಳ ಹಿರಿಯ ಮುಖಂಡರು ಭಾಗಿಯಾಗಿ ತಮ್ಮ ತಮ್ಮ ವಿಚಾರಗಳನ್ನು ಹಂಚಿಕೊಂಡರು.

ವಚನ ದರ್ಶನ

ಪಾತಕ ಶತಕೋಟಿಯನೊರಸಲು ಸಾಲದೆ ಒಂದು ಶಿವನ ನಾಮ ಸಾಲದೆ ಒಂದು ಹರನ ನಾಮ?ಕೂಡಲಸಂಗಮದೇವಾ, ನಿಮ್ಮ ಉಂಡಿಗೆಯ ಪಶುವ ಮಾಡಿದೆಯಾಗಿ

"ಪಾತಕ ಶತಕೋಟಿ" ಎಂಬ ಪದಗುಚ್ಛವು ವಿಶ್ವಗುರು ಬಸವಣ್ಣನವರ ಪ್ರಸಿದ್ಧ ವಚನವೊಂದರ ಭಾಗವಾಗಿದೆ.
ಪಾತಕ.ಮಹಾಪಾಪ ಅಥವಾ ತಪ್ಪು.ಶತಕೋಟಿ.ನೂರು ಕೋಟಿ (ಅನಂತ ಅಥವಾ ಅಸಂಖ್ಯಾತ).ಒರಸಲು. ಅಳಿಸಿಹಾಕಲು ಅಥವಾ ನಾಶಮಾಡಲು.ಉಂಡಿಗೆ. ಒಡೆಯನ ಮುದ್ರೆ (ಇಲ್ಲಿ ಲಿಂಗದ ಮುದ್ರೆ ಅಥವಾ ದೀಕ್ಷೆ).ಪಶು.ಪ್ರಾಣಿ ಅಥವಾ ಇಲ್ಲಿ ಭಗವಂತನಿಗೆ ಸಂಪೂರ್ಣವಾಗಿ ಶರಣಾದ ಜೀವಾತ್ಮ.

ಮನುಷ್ಯನು ಅರಿತೋ ಅಥವಾ ಅರಿಯದೆಯೋ ಮಾಡಿರುವ ನೂರು ಕೋಟಿ ಪಾಪಗಳನ್ನು (ಅಸಂಖ್ಯಾತ ತಪ್ಪುಗಳನ್ನು) ತೊಳೆದುಹಾಕಲು ಭಗವಂತನಾದ ಆ ಶಿವನ ಅಥವಾ ಹರನ ಒಂದು ನಾಮಸ್ಮರಣೆ ಸಾಲದೇ? ಖಂಡಿತವಾಗಿಯೂ ಸಾಕು ಎಂದು ಬಸವಣ್ಣನವರು ಇಲ್ಲಿ ಪ್ರತಿಪಾದಿಸುತ್ತಾರೆ.ಮುಂದುವರಿಯುವುದು,
"ಎಲೈ ಕೂಡಲಸಂಗಮದೇವನೇ, ನಾನು ನಿನ್ನ ಲಿಂಗದ ಮುದ್ರೆಯನ್ನು ಧರಿಸಿದ ನಿನ್ನದೇ ಮನೆಯ ಆಕಳು ಪಶುವಾಗಿದ್ದೇನೆ. ನನ್ನ ಒಡೆಯನಾದ ನೀನು ನನ್ನನ್ನು ಸಲಹುವಾಗ, ನನ್ನ ಪಾಪಗಳ ಬಗ್ಗೆ ನನಗೆ ಭಯವೇಕೆ?" ಎಂಬ ನಂಬಿಕೆ ಮತ್ತು ಭಕ್ತಿಯ ಶರಣಾಗತಿಯ ಭಾವ ಈ ವಚನದಲ್ಲಿದೆ. ಭಗವಂತನ ನಾಮಸ್ಮರಣೆಗೆ ಮತ್ತು ಕರುಣೆಗೆ ಅಪಾರವಾದ ಶಕ್ತಿಯಿದೆ ಎಂಬುದನ್ನು ಇದು ತಿಳಿಸುತ್ತದೆ.ನಿಮಗೆ ಈ ವಚನದ ಹೆಚ್ಚಿನ ವಿಶ್ಲೇಷಣೆ ಬೇಕೇ ಅಥವಾ ಬೇರೆ ಯಾವುದಾದರೂ ವಚನದ ಅರ್ಥ ತಿಳಿಯಬೇಕಾಗಿದೆಯೇ? ತಿಳಿಸಿ, ನಾನು ಸಹಾಯ ಮಾಡುತ್ತೇನೆ. ಈ ವಚನದಿಂದ ಜೀವನ ಪಾವನಗೊಳಿಸಿಕೊಳ್ಳೋಣ. ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಶ್ರೀ ಅಂಬಾದೇವಿ ದರ್ಶನ ಪಡೆದ ಶಾಸಕ ಹಂಪನಗೌಡ ಬಾದರ್ಲಿ

ಪತ್ನಿಯೊಂದಿಗೆ ದೇವಿಯ ದರ್ಶನ; ನೂತನ ದೇವಸ್ಥಾನ ಕಾಮಗಾರಿ ಪರಿಶೀಲನೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕ್ಷೇತ್ರದ ಆರಾಧ್ಯ ದೇವತೆಯಾದ ಶ್ರೀ ಅಂಬಾದೇವಿಯ ದರ್ಶನವನ್ನು ಮಾನ್ಯ ಶಾಸಕ ಶ್ರೀ ಹಂಪನಗೌಡ ಬಾದರ್ಲಿ ಅವರು ತಮ್ಮ ಪತ್ನಿಯವರೊಂದಿಗೆ ಪಡೆದು, ದೇವಿಯ ಆಶೀರ್ವಾದ ಪಡೆದರು.

ಶಾಸಕರು ಪತ್ನಿಯವರೊಂದಿಗೆ ದೇವಸ್ಥಾನಕ್ಕೆ ಆಗಮಿಸಿದ ಸಂದರ್ಭದಲ್ಲಿ ದೇವಾಲಯದ ಆವರಣದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿತ್ತು. ಶ್ರೀ ಅಂಬಾದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಕ್ಷೇತ್ರದ ಜನತೆಗೆ ಸುಖ, ಶಾಂತಿ, ಸಮೃದ್ಧಿ ಹಾಗೂ ಉತ್ತಮ ಮಳೆ?ಬೆಳೆ ಕರುಣಿಸಲಿ ಎಂದು ಪ್ರಾರ್ಥಿಸಿದರು. ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದ ಬಳಿಕ ದೇವಸ್ಥಾನದ ಅಭಿವೃದ್ಧಿ ಕಾರ್ಯಗಳ ಕುರಿತು ಮಾಹಿತಿ ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ದೇವಸ್ಥಾನದ ಕಾಮಗಾರಿಯನ್ನು ಶಾಸಕರು ವೀಕ್ಷಿಸಿದರು. ದೇವಸ್ಥಾನದ ನಿರ್ಮಾಣ ಕಾರ್ಯದ ಪ್ರಗತಿ, ಕೈಗೊಳ್ಳಲಾಗಿರುವ ವಿವಿಧ ಕಾಮಗಾರಿಗಳು ಹಾಗೂ ನಿರ್ಮಾಣದ ಗುಣಮಟ್ಟದ ಕುರಿತು ಸಂಬಂಧಿಸಿದವರಿಂದ ಮಾಹಿತಿ ಪಡೆದು ಪರಿಶೀಲನೆ ನಡೆಸಿದರು.




ದೇವಸ್ಥಾನದ ನಿರ್ಮಾಣ ಕಾರ್ಯವು ನಿಗದಿತ ಯೋಜನೆ ಹಾಗೂ ಗುಣಮಟ್ಟದ ಮಾನದಂಡಗಳಿಗೆ ಅನುಗುಣವಾಗಿ ನಡೆಯಬೇಕು. ಕಾಮಗಾರಿಯಲ್ಲಿ ಯಾವುದೇ ರೀತಿಯ ಗುಣಮಟ್ಟದ ಕೊರತೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು ಎಂದು ಶಾಸಕರು ಸೂಚಿಸಿದರು. ದೇವಸ್ಥಾನವು ಭಕ್ತರ ಧಾರ್ಮಿಕ ಭಾವನೆಗಳಿಗೆ ಅನುಗುಣವಾಗಿ ಸುಂದರವಾಗಿ ಹಾಗೂ ಸುಸಜ್ಜಿತವಾಗಿ ನಿರ್ಮಾಣಗೊಳ್ಳುವುದರ ಜೊತೆಗೆ, ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಭಕ್ತರಿಗೆ ಅಗತ್ಯ ಸೌಲಭ್ಯಗಳು ದೊರೆಯುವಂತಿರಬೇಕು ಎಂಬ ಆಶಯವನ್ನು ವ್ಯಕ್ತಪಡಿಸಿದರು.

ಶ್ರೀ ಅಂಬಾದೇವಿ ಕ್ಷೇತ್ರವು ಈ ಭಾಗದ ಜನರ ಧಾರ್ಮಿಕ ನಂಬಿಕೆ ಹಾಗೂ ಭಕ್ತಿಯೊಂದಿಗೆ ಅವಿನಾಭಾವ ಸಂಬಂಧ ಹೊಂದಿದ್ದು, ಕ್ಷೇತ್ರದ ಅಭಿವೃದ್ಧಿ ಮತ್ತು ದೇವಸ್ಥಾನದ ಮೂಲಸೌಕರ್ಯಗಳ ಸುಧಾರಣೆಗೆ ಅಗತ್ಯ ಸಹಕಾರ ನೀಡಲಾಗುವುದು ಎಂದು ಶಾಸಕರು ತಿಳಿಸಿದರು.

ದೇವಸ್ಥಾನದ ಅಭಿವೃದ್ಧಿ ಕಾರ್ಯಗಳು ವೇಗವಾಗಿ ಮತ್ತು ವ್ಯವಸ್ಥಿತವಾಗಿ ಪೂರ್ಣಗೊಂಡು, ಭಕ್ತರಿಗೆ ಅನುಕೂಲವಾಗುವಂತಾಗಲಿ ಎಂಬುದು ಸ್ಥಳೀಯರ ಆಶಯವಾಗಿದೆ. ನೂತನ ದೇವಸ್ಥಾನದ ನಿರ್ಮಾಣದಿಂದ ಕ್ಷೇತ್ರದ ಧಾರ್ಮಿಕ ಮಹತ್ವ ಮತ್ತಷ್ಟು ಹೆಚ್ಚುವುದರ ಜೊತೆಗೆ, ಮುಂದಿನ ದಿನಗಳಲ್ಲಿ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಉತ್ತಮ ವಾತಾವರಣ ನಿರ್ಮಾಣವಾಗಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ದೇವಸ್ಥಾನದ ಆಡಳಿತ ಮಂಡಳಿಯವರು, ಗಣ್ಯರು, ಸ್ಥಳೀಯ ಮುಖಂಡರು, ಭಕ್ತರು ಹಾಗೂ ಸಂಬಂಧಿಸಿದ ಕಾಮಗಾರಿ ಸಿಬ್ಬಂದಿ ಉಪಸ್ಥಿತರಿದ್ದರು.



ಬಸನಗೌಡ ಬಾದರ್ಲಿ ನಾಯಕತ್ವಕ್ಕೆ ಹೆಚ್ಚುತ್ತಿರುವ ಜನಬೆಂಬಲ!

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಸನಗೌಡ ಬಾದರ್ಲಿ ಅವರ ಜನಪರ ಕಾಯಕ, ಅಭಿವೃದ್ಧಿ ಚಿಂತನೆ ಹಾಗೂ ಜನರೊಂದಿಗೆ ನಿರಂತರ ಸಂಪರ್ಕವನ್ನು ಮೆಚ್ಚಿ ಗೋರೆಬಾಳ ಕ್ಯಾಂಪ್ ಹಾಗೂ ದುರ್ಗಾ ಕ್ಯಾಂಪ್‌ನ ಹಲವು ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಅಧಿಕೃತವಾಗಿ ಸೇರ್ಪಡೆಯಾದರು.



ಗೋರೆಬಾಳ ಕ್ಯಾಂಪ್‌ನ ಕೆ. ಸುಬ್ಬರಾವ್, ಆರ್. ಶ್ರೀಹರಿ ರಾಜು, ಕೆ. ರಾಜು ಹಾಗೂ ದುರ್ಗಾ ಕ್ಯಾಂಪ್‌ನ ಜೆ. ವೆಂಕಟೇಶ್ವರ, ನಿರಂಜನ ಅವರು ಶ್ರೀ ಬಸನಗೌಡ ಬಾದರ್ಲಿ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷದ ತತ್ವ?ಸಿದ್ಧಾಂತಗಳನ್ನು ಒಪ್ಪಿಕೊಂಡು ಪಕ್ಷಕ್ಕೆ ಸೇರ್ಪಡೆಯಾದರು. ನೂತನವಾಗಿ ಸೇರ್ಪಡೆಯಾದ ಮುಖಂಡರನ್ನು ಆತ್ಮೀಯವಾಗಿ ಸ್ವಾಗತಿಸಿ, ಪಕ್ಷದ ಶಾಲು ಹಾಕಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಪಕ್ಷದ ಮುಖಂಡರು, ಕಾಂಗ್ರೆಸ್ ಪಕ್ಷವು ಜನಪರ ಆಶಯಗಳು, ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಅಭಿವೃದ್ಧಿಯ ಚಿಂತನೆಯೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಗ್ರಾಮೀಣ ಭಾಗದ ಜನರ ಸಮಸ್ಯೆಗಳಿಗೆ ಸ್ಪಂದಿಸುವುದು, ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕದಲ್ಲಿರುವುದು ಹಾಗೂ ಪಕ್ಷದ ಸಂಘಟನೆಯನ್ನು ಬೂತ್ ಮಟ್ಟದಿಂದ ಬಲಪಡಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು. ತಳಮಟ್ಟದಿಂದ ಪಕ್ಷ ಸಂಘಟನೆಗೆ ಒತ್ತು ಸಿಂಧನೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಗ್ರಾಮ, ಕ್ಯಾಂಪ್ ಹಾಗೂ ಬೂತ್ ಮಟ್ಟದಲ್ಲಿ ಕಾರ್ಯಕರ್ತರನ್ನು ಸಕ್ರಿಯಗೊಳಿಸುವ ಅಗತ್ಯವಿದೆ. ಪ್ರತಿಯೊಂದು ಗ್ರಾಮದಲ್ಲಿಯೂ ಪಕ್ಷದ ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕ ಹೊಂದಿ, ಸ್ಥಳೀಯ ಸಮಸ್ಯೆಗಳನ್ನು ಆಲಿಸಿ, ಜನರ ಧ್ವನಿಯನ್ನು ಸಂಘಟನೆಯ ಮೂಲಕ ಸಮರ್ಥವಾಗಿ ಮುಂದಕ್ಕೆ ಕೊಂಡೊಯ್ಯುವ ಉದ್ದೇಶ ಹೊಂದಲಾಗಿದೆ ಎಂದು ಮುಖಂಡರು ತಿಳಿಸಿದರು. ಪಕ್ಷದ ಸಂಘಟನೆ ಕೇವಲ ಚುನಾವಣಾ ಸಂದರ್ಭದಲ್ಲಿ ಮಾತ್ರ ಸಕ್ರಿಯವಾಗದೆ, ನಿರಂತರವಾಗಿ ಜನರ ನಡುವೆ ಇರಬೇಕು. ರೈತರು, ಕಾರ್ಮಿಕರು, ಯುವಕರು, ಮಹಿಳೆಯರು, ವಿದ್ಯಾರ್ಥಿಗಳು ಹಾಗೂ ವಿವಿಧ ಸಮುದಾಯಗಳ ಜನರ ಸಮಸ್ಯೆಗಳನ್ನು ಆಲಿಸಿ, ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಜಾಪ್ರಭುತ್ವದ ಮಾರ್ಗದಲ್ಲಿ ಪ್ರಯತ್ನಿಸುವುದು ಪಕ್ಷದ ಸಂಘಟನೆಯ ಪ್ರಮುಖ ಭಾಗವಾಗಿದೆ ಎಂಬ ಅಭಿಪ್ರಾಯ ವ್ಯಕ್ತವಾಯಿತು. ನೂತನವಾಗಿ ಕಾಂಗ್ರೆಸ್‌ಗೆ ಸೇರ್ಪಡೆಯಾದ ಮುಖಂಡರು ತಮ್ಮ ತಮ್ಮ ಪ್ರದೇಶಗಳಲ್ಲಿ ಪಕ್ಷದ ಸಂಘಟನೆಗೆ ಶಕ್ತಿ ತುಂಬುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಜನರನ್ನು ಪಕ್ಷದೊಂದಿಗೆ ಸಂಪರ್ಕಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಮಸ್ಕಿಯಲ್ಲಿ ಸತೀಶ್ ಜಾರಕಿಹೊಳಿ ವಿರುದ್ಧದ ED ಶೋಧ ಖಂಡಿಸಿ ಬೃಹತ್ ಪ್ರತಿಭಟನೆ

ಅಹಿಂದ ಹಾಗೂ ಸರ್ವ ಸಮಾಜದ ಮುಖಂಡರು, ಕಾರ್ಯಕರ್ತರ ಒಗ್ಗಟ್ಟು; ಕೇಂದ್ರ ತನಿಖಾ ಸಂಸ್ಥೆಗಳ ಕ್ರಮದ ಕುರಿತು ಆಕ್ರೋಶ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಲೋಕೋಪಯೋಗಿ ಸಚಿವ ಹಾಗೂ ಕಾಂಗ್ರೆಸ್‌ನ ಹಿರಿಯ ನಾಯಕ ಶ್ರೀ ಸತೀಶ್ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ (ಇಡಿ) ನಡೆಸಿದ ಶೋಧ ಕಾರ್ಯಾಚರಣೆಯನ್ನು ಖಂಡಿಸಿ ಇಂದು ಮಸ್ಕಿ ಪಟ್ಟಣದಲ್ಲಿ ಅಹಿಂದ ವರ್ಗ ಹಾಗೂ ವಿವಿಧ ಸಮಾಜಗಳ ಮುಖಂಡರು, ಕಾರ್ಯಕರ್ತರು ಮತ್ತು ಅಭಿಮಾನಿಗಳ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ಮಸ್ಕಿ ಪಟ್ಟಣದಲ್ಲಿ ನಡೆದ ಪ್ರತಿಭಟನೆಯಲ್ಲಿ ಅಹಿಂದ ವರ್ಗದ ವಿವಿಧ ಸಮುದಾಯಗಳ ಮುಖಂಡರು ಹಾಗೂ ಸರ್ವ ಸಮಾಜದ ಪ್ರತಿನಿಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನಾಕಾರರು ಕೈಯಲ್ಲಿ ಫಲಕಗಳನ್ನು ಹಿಡಿದು, ಘೋಷಣೆಗಳನ್ನು ಕೂಗುತ್ತಾ ಇಡಿ ಶೋಧ ಕಾರ್ಯಾಚರಣೆಯ ಕುರಿತು ತಮ್ಮ ವಿರೋಧವನ್ನು ದಾಖಲಿಸಿದರು.

ಸತೀಶ್ ಜಾರಕಿಹೊಳಿ ಅವರ ರಾಜಕೀಯ ಹಾಗೂ ಸಾಮಾಜಿಕ ಚಟುವಟಿಕೆಗಳ ಹಿನ್ನೆಲೆಯಲ್ಲಿ ಅವರನ್ನು ಬೆಂಬಲಿಸುವ ಅಹಿಂದ ಮತ್ತು ವಿವಿಧ ಸಮಾಜಗಳ ಮುಖಂಡರು ಈ ಪ್ರತಿಭಟನೆ ಆಯೋಜಿಸಿದ್ದರು. ತನಿಖಾ ಸಂಸ್ಥೆಗಳು ತಮ್ಮ ಕಾನೂನುಬದ್ಧ ಕರ್ತವ್ಯವನ್ನು ಪಾರದರ್ಶಕವಾಗಿ ನಿರ್ವಹಿಸಬೇಕು ಹಾಗೂ ಯಾವುದೇ ಕ್ರಮದ ಕುರಿತು ಸಾರ್ವಜನಿಕರಲ್ಲಿ ಉಂಟಾಗುವ ಅನುಮಾನಗಳಿಗೆ ಸ್ಪಷ್ಟತೆ ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಇತ್ತೀಚೆಗೆ ಸತೀಶ್ ಜಾರಕಿಹೊಳಿ ಹಾಗೂ ಅವರ ಕುಟುಂಬಸ್ಥರು ಮತ್ತು ಆಪ್ತರಿಗೆ ಸಂಬಂಧಿಸಿದ ಹಲವು ಸ್ಥಳಗಳಲ್ಲಿ ಇಡಿ ಶೋಧ ನಡೆಸಿರುವುದಾಗಿ ವರದಿಯಾಗಿದೆ. ತನಿಖೆ ಹಣಕಾಸು ವ್ಯವಹಾರಗಳು ಹಾಗೂ ವಿದೇಶಿ ಹೂಡಿಕೆಗಳಿಗೆ



ಸಂಬಂಧಿಸಿದ ಪ್ರಕರಣದ ಹಿನ್ನೆಲೆಯಲ್ಲಿ ನಡೆಯುತ್ತಿದೆ ಎಂದು ವರದಿಗಳು ತಿಳಿಸಿವೆ.

ಪ್ರತಿಭಟನೆಯಲ್ಲಿ ಮಾತನಾಡಿದ ಮುಖಂಡರು, ಅಹಿಂದ ಹಾಗೂ ಹಿಂದುಳಿದ ವರ್ಗಗಳ ಜನರ ಧ್ವನಿಯಾಗಿ ಕೆಲಸ ಮಾಡುತ್ತಿರುವ ನಾಯಕರ ವಿರುದ್ಧ ಕೈಗೊಳ್ಳಲಾಗುವ ಯಾವುದೇ ತನಿಖಾ ಕ್ರಮಗಳು ಪಾರದರ್ಶಕವಾಗಿರಬೇಕು ಎಂದು ಆಗ್ರಹಿಸಿದರು. ತನಿಖೆ ನಡೆಸುವುದಕ್ಕೆ ವಿರೋಧವಲ್ಲ; ಆದರೆ ತನಿಖಾ ಪ್ರಕ್ರಿಯೆ ಕಾನೂನುಬದ್ಧವಾಗಿ, ನಿಷ್ಪಕ್ಷಪಾತವಾಗಿ ಮತ್ತು ಪಾರದರ್ಶಕವಾಗಿ ನಡೆಯಬೇಕು ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಮಸ್ಕಿಯ ಪ್ರತಿಭಟನೆಯ ಮತ್ತೊಂದು ಪ್ರಮುಖ ವಿಶೇಷವೆಂದರೆ ವಿವಿಧ ಸಮಾಜಗಳ ಮುಖಂಡರು ಒಂದೇ ವೇದಿಕೆಯಲ್ಲಿ ಸೇರಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದು. ಅಹಿಂದ ವರ್ಗದ ವಿವಿಧ ಸಮುದಾಯಗಳ ಜೊತೆಗೆ ಸರ್ವ ಸಮಾಜದ ಮುಖಂಡರು ಭಾಗವಹಿಸುವ ಮೂಲಕ ಸಾಮಾಜಿಕ ಒಗ್ಗಟ್ಟಿನ ಸಂದೇಶವನ್ನು ಸಾರಿದರು. ಪ್ರತಿಭಟನಾಕಾರರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ತನಿಖಾ ಸಂಸ್ಥೆಗಳ ಕಾರ್ಯವೈಖರಿ ಕುರಿತು ಪ್ರಶ್ನೆಗಳನ್ನು ಕೇಳುವ ಹಾಗೂ ತಮ್ಮ ಅಭಿಪ್ರಾಯವನ್ನು ಶಾಂತಿಯುತವಾಗಿ ವ್ಯಕ್ತಪಡಿಸುವ ಹಕ್ಕು ಪ್ರತಿಯೊಬ್ಬ ನಾಗರಿಕನಿಗೂ ಇದೆ ಎಂದು ಹೇಳಿದರು. ಯಾವುದೇ ವಿಚಾರದಲ್ಲಿ ಕಾನೂನು ತನ್ನದೇ ಆದ ರೀತಿಯಲ್ಲಿ ಮುಂದುವರಿಯಬೇಕು ಮತ್ತು ಅಂತಿಮ ಸತ್ಯ ತನಿಖೆಯ ಮೂಲಕ ಹೊರಬರಬೇಕು ಎಂಬ ಅಭಿಪ್ರಾಯವೂ ವ್ಯಕ್ತವಾಯಿತು. "ಸಮಾಜದ ಹಿತಕ್ಕಾಗಿ ಧ್ವನಿ ಎತ್ತುವುದು ನಮ್ಮ ಹಕ್ಕು; ನ್ಯಾಯ ಮತ್ತು ಪಾರದರ್ಶಕತೆಗಾಗಿ ಒಗ್ಗಟ್ಟಿನಿಂದ ಹೋರಾಡುವುದು ನಮ್ಮ ಕರ್ತವ್ಯ" ಎಂಬ ಸಂದೇಶದೊಂದಿಗೆ ಪ್ರತಿಭಟನೆ ನಡೆಯಿತು.

ಮಸ್ಕಿಯಲ್ಲಿ ನಡೆದ ಈ ಪ್ರತಿಭಟನೆ ಅಹಿಂದ ಹಾಗೂ ಸರ್ವ ಸಮಾಜದ ವಿವಿಧ ವರ್ಗಗಳ ಮುಖಂಡರು ಮತ್ತು ಕಾರ್ಯಕರ್ತರು ಒಗ್ಗಟ್ಟಾಗಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ ಪ್ರಮುಖ ಕಾರ್ಯಕ್ರಮವಾಗಿ ಗಮನ ಸೆಳೆಯಿತು. ಪ್ರತಿಭಟನೆಯ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಅಗತ್ಯ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಈ ಸಂದರ್ಭದಲ್ಲಿ ಅಹಿಂದ ವರ್ಗದ ವಿವಿಧ ಸಮಾಜಗಳ ಮುಖಂಡರು, ಸರ್ವ ಸಮಾಜದ ಮುಖಂಡರು, ಯುವಕರು, ಕಾರ್ಯಕರ್ತರು ಹಾಗೂ ಸತೀಶ್ ಜಾರಕಿಹೊಳಿ ಅವರ ಅಭಿಮಾನಿಗಳು ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.



ಕಾರುಣ್ಯಾಶ್ರಮದಲ್ಲಿ ಜೆಡಿಎಸ್ ಯುವ ಮುಖಂಡ ಅಭಿಷೇಕ ನಾಡಗೌಡ್ರು ಅವರ ಜನ್ಮದಿನ ಸಮಾರಂಭ

ಕಾರುಣ್ಯಾಶ್ರಮವು ನಮ್ಮ ಸ್ವಂತದ ಮನೆಯ ಹಾಗೆ ನಾಡಗೌಡ್ರ ಕುಟುಂಬದವರ ಹೃದಯದಲ್ಲಿದೆ : ಅಭಿಷೇಕ್ ನಾಡಗೌಡ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಾಡಗೌಡ್ರು ಅಭಿಮಾನಿ ಬಳಗ ಹಾಗೂ ಸಿಂಧನೂರು ತಾಲೂಕ ಜೆ.ಡಿ.ಎಸ್. ಘಟಕ ಶ್ರೀ ಶಾಂಭವಿ ಪುಣ್ಯಾಶ್ರಮ ಸಿಂಧನೂರು ಶ್ರೀ ಮಠ ಸೇವಾ ಟ್ರಸ್ಟ್(ರಿ)ಹರೇಟನೂರು ಸ್ವಾಮಿ ಚಾರಿಟೇಬಲ್ ಟ್ರಸ್ಟ್ (ರಿ)ಕರಡಕಲ್ ಹಾಗೂ ಅಭಿಷೇಕ್ ನಾಡಗೌಡ ಸ್ನೇಹ ಬಳಗ ಸಿಂಧನೂರು ವತಿಯಿಂದ ಜೆಡಿ-ಎಸ್ ಯುವ ಮುಖಂಡರಾದ ಅಭಿಷೇಕ್ ನಾಡಗೌಡ ಅವರ 37ನೇ ವರ್ಷದ ಜನ್ಮದಿನ ಸಮಾರಂಭ ಕಾರ್ಯಕ್ರಮವು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ " ನೊಂದ ಜೀವಿಗಳ ನಾಡಿಮಿಡಿತ" ಕಾರ್ಯಕ್ರಮಜಡಿಯಲ್ಲಿ ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ನೆರವೇರಿತು.

ಈ ಕಾರ್ಯಕ್ರಮದಲ್ಲಿ ಶ್ರೀ ಶಾಂಭವಿ ಪುಣ್ಯಾಶ್ರಮದ ವೇ.ಮೂ. ವೀರೇಶ ಯಡಿಯೂರುಮಠ ಹಾಗೂ ಸಿಂಧನೂರಿನ ಅನೇಕ ಸಮಾಜದ ಗುರುಗಳಿಂದ ಅಭಿಷೇಕ್ ನಾಡಗೌಡ ಅವರಿಗೆ ಸನ್ಮಾನಿಸಿ ಗೌರವಿಸಿ ಆಶೀರ್ವದಿಸಲಾಯಿತು.



ನಂತರ ಜೆಡಿಎಸ್ ಯುವ ಮುಖಂಡರಾದ ಅಭಿಷೇಕ ನಾಡಗೌಡ ಮಾತನಾಡಿ ಈ ನಮ್ಮ ಕಾರುಣ್ಯ ಆಶ್ರಮವು ನಮ್ಮ ಸ್ವಂತದ ಮನೆಯ ಹಾಗೆ ನಾಡಗೌಡ್ರ ಕುಟುಂಬದವರ ಹೃದಯದಲ್ಲಿದೆ.

ನಮ್ಮ ಮನೆಯ ಯಾವುದೇ ಕಾರ್ಯಕ್ರಮಗಳನ್ನಾಗಲಿ ಇಲ್ಲಿರುವ ಎಲ್ಲಾ ಹಿರಿಯ ವೃದ್ಧರೂ ಹಾಗೂ ದೇವರ ಮಕ್ಕಳಾದ ಬುದ್ಧಿಮಾಂದ್ಯರ ಆಶೀರ್ವಾದ ಸ್ವೀಕರಿಸುವ ಮೂಲಕ ಕಾರ್ಯಕ್ರಮಗಳನ್ನು ಮಾಡುವುದು ಸಂಪ್ರದಾಯವಾಗಿ ಬಿಟ್ಟಿದೆ. ಈ ಆಶ್ರಮಕ್ಕೆ ಸ್ವಂತ ಜಾಗದ ಕೋರಿಕೆಗಾಗಿ ಸರ್ಕಾರದೊಂದಿಗೆ ನಾವು ಕೂಡ ಹಲವಾರು ಪ್ರಯತ್ನಗಳನ್ನು ಮಾಡಿದ್ದೇವೆ. 2028ರ ನಮ್ಮ ಸ್ವಚ್ಛ ಸರ್ಕಾರದಲ್ಲಿ ಈ ಆಶ್ರಮಕ್ಕೆ ಖಂಡಿತ ಜಾಗವನ್ನು ಕೊಡಿಸುತ್ತೇವೆ ಎನ್ನುವ ಭರವಸೆ ನೀಡುತ್ತಿದ್ದೇವೆ. ನಮ್ಮ ಹರೇಟನೂರಿನ ಕಡುಬಡತನದ ಬಡಜಂಗಮ ಕುಟುಂಬವು ಊರಿನ ಆದಿಶಕ್ತಿ ಗ್ರಾಮ ದೇವತೆಯ ಅರ್ಚಕರಾಗಿ ಮತ್ತು ಸಿಂಧನೂರಿನಂತಹ ಪಟ್ಟಣದಲ್ಲಿ ಕಾರುಣ್ಯ ಎನ್ನುವ ಕರುಣೆಯ ಕುಟುಂಬವನ್ನು ಕಟ್ಟಿ ನಿರಂತರ ತಮ್ಮ ಜೋಳಿಗೆಯ ಮೂಲಕ ಅನಾಥರಿಗೆ ಅಂದವಾದ ಬದುಕನ್ನು ಕಟ್ಟಿಕೊಂಡಿರುವ ಕಾರುಣ್ಯ ಆಶ್ರಮದ ಸೇವೆಯು ಶ್ಲಾಘನೀಯವಾಗಿದೆ.

ಕಾರುಣ್ಯ ಆಶ್ರಮದ ಕೂಸುಗಳ ಆಶೀರ್ವಾದ ಸದಾವಕಾಲ ನಮ್ಮೆಲ್ಲರ ಮೇಲಿರಲಿ ನಿಮ್ಮ ಈ ಹಾರೈಕೆ ಹಾರೈಕೆಗೆ ನಮ್ಮ ಕುಟುಂಬದಿಂದ ಅನಂತ ಕೋಟಿ ಕೋಟಿ ಪ್ರಣಾಮಗಳು ಎಂದು ಮಾತನಾಡಿದರು. ನಂತರ ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ ಶಾಂಭವಿ ಪುಣ್ಯಾಶ್ರಮದ ಪೀಠಾಧಿಪತಿಗಳಾದ ವೇ. ಮೂ. ವೀರೇಶ ಯಡಿಯೂರು ಮಠ ಕಾರುಣ್ಯ ಆಶ್ರಮದ ಹೊಸ ಜಾಗದ ಈ ಕಟ್ಟಡದ ನಿರ್ಮಾಣದ ಹಂತದಲ್ಲಿ ಬಹುದೊಡ್ಡ ಮಟ್ಟದ ಸಹಾಯ ಮಾಡಿದ ರಾಜಕಾರಣಿಗಳ ಏಕೈಕ ಕುಟುಂಬ ನಮ್ಮ ನಾಡಗೌಡರದ್ದಾಗಿತ್ತು. ಅವರು ಆ ದಿನದಲ್ಲಿ ಮಾಡಿದ ಸಹಾಯ ಇಂದು ಅದೆಷ್ಟು ಅಂಧ-ಅನಾಥರ ಬದುಕಿಗೆ ನೆರಳಾಗಿದೆ. ಅನೇಕ ಜನಪರ ಸಮಾಜಪರ ಮತ್ತು ಅನಾಥಪರ ಸೇವೆಯಲ್ಲಿ ನಿರಂತರ ತಮ್ಮನ್ನು ತಾವು ತೊಡಗಿಸಿಕೊಂಡಿರುವ ರಾಜಕಾರಣದ ಕುಟುಂಬ ಯಾವುದಾದರ ಇದ್ದರೆ ಅದು ನಮ್ಮ ಸಿಂಧನೂರಿನ ನಾಡಗೌಡರ ಕುಟುಂಬ ಎಂದು ನಾವೆಲ್ಲರೂ ಹೆಮ್ಮೆಯಿಂದ ಹೇಳುತ್ತಿದ್ದೇವೆ ಎಂದು ಮಾತನಾಡಿ ಅಭಿಷೇಕ್ ನಾಡಗೌಡ ಅವರಿಗೆ ಶುಭಕೋರಿ ಆಶೀರ್ವದಿಸಿದರು.

ಈ ಕಾರ್ಯಕ್ರಮದಲ್ಲಿ ಹನುಮನಗೌಡ. ಗಣೇಶ. ವೀರಬಾಬು ಜೀವನ್. ವೆಂಕರೆಡ್ಡಿ. ಗುರುರಾಜ ಜವಳಗೇರಾ. ವಿಲಾಸ. ಜಾನಣ್ಣ ಸಿಂಧನೂರು. ಶಿವು ಕೋಟೆ ಬಾಬಾ ಜವಳಗೇರಾ. ನಾಗರಾಜ ದಿದ್ದಿಗಿ. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ.ಮರಿಯಪ್ಪ ಜ್ಯೋತಿ. ಮಹಾಂತೇಶ ದೋಟಿಹಾಳ. ಶರಣು ಸ್ವಾಮಿ.ಬಸವ ಸ್ವಾಮಿ. ಹಾಗೂ ನಾಡಗೌಡ್ರು ಹಲವಾರು ಅಭಿಮಾನಿಗಳು ಉಪಸ್ಥಿತರಿದ್ದರು

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101